**ಕರ್ನಾಟಕ ಸರ್ಕಾರ**

**ಪಶುಪಾಲನಾ ಮತ್ತು ಪಶುವೈದ್ಯ ಸೇವಾ ಇಲಾಖೆ**

**ವಿ.ವಿ.ಚಿಕ್ಕಗೋಪುರ, ಬೆಂಗಳೂರು-560001**

**ಪಶುವೈದ್ಯಕೀಯ ಸಹಾಯಕರು ಗ್ರೂಪ್ 'ಸಿ' 642 ಖಾಲಿ ಹುದ್ದೆಗಳಿಗೆ ನೇಮಕಾತಿ ಮಾಡುವ ಬಗ್ಗೆ**

**ಅಭ್ಯರ್ಥಿಗಳಿಗೆ ಸೂಚನೆಗಳು**

ಅಧಿಸೂಚನೆ ಸಂಖ್ಯೆ:**CAH:DRC:CR:VA-1:12-13, dated:05-12-2012**

ಆನ್‌ಲೈನ್ ಮೂಲಕ ಅರ್ಜಿಗಳನ್ನು ಸಲ್ಲಿಸಲು –

**ಪ್ರಾರಂಭ ದಿನಾಂಕ:06-12-2012**

**ಕೊನೆಯ ದಿನಾಂಕ:07-01-2013(ಸಂಜೆ 5.00 ಗಂಟೆಯವರೆಗೆ)**

**ಬ್ಯಾಂಕ್‌ನಲ್ಲಿ ಶುಲ್ಕವನ್ನು ಪಾವತಿಸಲು ಕೊನೆಯ ದಿನಾಂಕ:10-01-2013**

ಸರ್ಕಾರದ ಪತ್ರ ಸಂಖ್ಯೆ:ಪಸಂಮಿ:102:ಪಶುವಿ:2009, ದಿನಾಂಕ:20-10-2009 ಮತ್ತು ಸರ್ಕಾರದ ಕರಡು ನಿಯಮಾವಳಿ ಸಂಖ್ಯೆ:ಪಸಂಮೀ:31:ಪಶುವಿ:2011, ದಿನಾಂಕ:08-08-2012 ಹಾಗೂ ಸರ್ಕಾರದ ಅಂತಿಮ ನಿಯಮಾವಳಿ ಸಂಖ್ಯೆ:ಪಸಂಮೀ:31:ಪಶುವಿ:2011, ದಿನಾಂಕ:12-09-2012 ರಂದು ಜಾರಿಗೆ ಬಂದ ಕರ್ನಾಟಕ ಪಶುಪಾಲನಾ ಮತ್ತು ಪಶುವೈದ್ಯ ಸೇವಾ ಇಲಾಖೆಯ ವಿಶೇಷ ನಿಯಮಗಳು (2012 ರಲ್ಲಿ) ರೂ.11600-200-12000-250-13000-300-14200-350-15600-400-17200-450-19000-500-21000 ರ ವೇತನ ಶ್ರೇಣಿಯಲ್ಲಿ, ಜಿಲ್ಲಾ ಪಶು ಆಸ್ಪತ್ರೆಗಳು, ತಾಲ್ಲೂಕು ಪಶು ಆಸ್ಪತ್ರೆಗಳು, ಪಶು ಚಿಕಿತ್ಸಾಲಯಗಳು, ಪ್ರಾಥಮಿಕ ಪಶುಚಿಕಿತ್ಸಾಲಯಗಳು ಮತ್ತು ಜಾನುವಾರು ಕ್ಷೇತ್ರಗಳಲ್ಲಿ ಖಾಲಿ ಇರುವ 642 ಹುದ್ದೆಗಳಿಗೆ ಅರ್ಹ ಅಭ್ಯರ್ಥಿಗಳಿಂದ ವೆಬ್ ಸೈಟ್ ವಿಳಾಸ **http://ahvs.kar.nic.in** ನಲ್ಲಿ Online ಮೂಲಕ ಅರ್ಜಿಗಳನ್ನು ಆಹ್ವಾನಿಸಿದೆ.

1. ಪದನಾಮ, ವೇತನ ಶ್ರೇಣಿ, ಹುದ್ದೆಗಳ ಸಂಖ್ಯೆ, ನಿಗದಿಪಡಿಸಿರುವ ವಿದ್ಯಾರ್ಹತೆ ಮತ್ತು ವಯೋಮಿತಿ ವಿವರ ಈ ಕೆಳಕಂಡಂತಿದೆ:

| ಕ್ರಮ ಸಂಖ್ಯೆ | ಹುದ್ದೆಯ ಪದನಾಮ ವೇತನ ಶ್ರೇಣಿ ಮತ್ತು ಒಟ್ಟು ಹುದ್ದೆಗಳು | ನಿಗದಿಪಡಿಸಿರುವ ಕನಿಷ್ಠ ವಿದ್ಯಾರ್ಹತೆ | ವಯೋಮಿತಿ |
|---|---|---|---|
| 1 | ಪಶುವೈದ್ಯಕೀಯ ಸಹಾಯಕರು ವೇತನ ಶ್ರೇಣಿ ರೂ.11600-200-12000-250-13000-300-14200-350-15600-400-17200-450-19000-500-21000 | ಎಸ್.ಎಸ್.ಎಲ್.ಸಿ ಅಥವಾ ತತ್ಸಮಾನ ಪರೀಕ್ಷೆಯಲ್ಲಿ ತೇರ್ಗಡೆಯಾಗಿರಬೇಕು, ಕರ್ನಾಟಕ ಸರ್ಕಾರದಿಂದ ಮಾನ್ಯತೆ ಪಡೆದ ಸಂಸ್ಥೆಗಳಲ್ಲಿ ಡೈರಿ ಅಭಿವೃದ್ಧಿ ಅಥವಾ ಕುಕ್ಕುಟ ವಿಜ್ಞಾನಗಳಲ್ಲಿ 2 ವರ್ಷದ ಡಿಪ್ಲೋಮೊ / ಜೆ.ಓ.ಸಿ ಕೋರ್ಸ್‌ನಲ್ಲಿ ಉತ್ತೀರ್ಣರಾದ ಅಭ್ಯರ್ಥಿಗಳಿಗೆ ಶೇ.10 ಮಾನ್ಯತೆ ಅಂಕಗಳನ್ನು ಸೇರಿಸಲಾಗುವುದು. | **ಕನಿಷ್ಠ:** 18 ವರ್ಷಗಳು<br>**ಗರಿಷ್ಠ**<br><br>ಸಾಮಾ: 35 ವರ್ಷಗಳು<br>ಪ್ರವರ್ಗ: II(ಎ), II(ಬಿ), III (ಎ), III (ಬಿ) : 38 ವರ್ಷಗಳು<br><br>ಪ.ಜಾತಿ, ಪಪಂ ಮತ್ತು ಪ್ರವರ್ಗ-1 : 40 ವರ್ಷಗಳು |
| **ಆಯ್ಕೆ ವಿಧಾನ:**- ಅಭ್ಯರ್ಥಿಗಳು ನಿಗದಿಪಡಿಸಿರುವ ವಿದ್ಯಾರ್ಹತೆಯಲ್ಲಿ ಗಳಿಸಿರುವ ಅಂಕಗಳು ಮತ್ತು ಮೀಸಲಾತಿ ಆಧಾರದ ಮೇಲೆ ಆಯ್ಕೆ ಮಾಡಲಾಗುವುದು. | | | |
| **ಆಯ್ಕೆಯಾದ ಅಭ್ಯರ್ಥಿಗಳಿಗೆ ಇಲಾಖೆಯ ತರಬೇತಿ ಕೇಂದ್ರಗಳಲ್ಲಿ ಆರು ತಿಂಗಳ ತರಬೇತಿಯನ್ನು ನೀಡಲಾಗುವುದು.** | | | |

## ಗ್ರೂಪ್ 'ಸಿ' ಹುದ್ದೆಗಳು – 642(ವರ್ಗೀಕರಣ)

| ವರ್ಗ | ಇತರೆ | ಮಹಿಳಾ | ಗ್ರಾಮೀಣ | ಮಾ.ಸೈ | ಅಂ.ವಿ | ಯೋ.ನಿ | ಕ.ಮಾ.ಅ | ಒಟ್ಟು |
|---|---|---|---|---|---|---|---|---|
| ಅ) ಪ.ಜಾ | 19 | 29 | 25 | 09 | 05 | 04 | 05 | 96 |
| ಆ) ಪ.ಪಂ | 04 | 06 | 05 | 01 | 01 | 01 | 01 | 19 |
| ಇ) ಪ್ರ–1 | 05 | 08 | 07 | 02 | 02 | 01 | 01 | 26 |
| ಈ) ಪ್ರ–2(ಎ) | 19 | 29 | 25 | 09 | 05 | 05 | 05 | 97 |
| ಉ) ಪ್ರ–2(ಬಿ) | 06 | 08 | 07 | 02 | 01 | 01 | 01 | 26 |
| ಊ) ಪ್ರ–3(ಎ) | 05 | 08 | 06 | 02 | 02 | 01 | 01 | 25 |
| ಋ) ಪ್ರ–3(ಬಿ) | 07 | 10 | 08 | 03 | 02 | 01 | 01 | 32 |
| ಋ) ಸಾ.ಅ | 65 | 98 | 83 | 28 | 18 | 14 | 15 | 321 |
| **ಒಟ್ಟು** | **130** | **196** | **166** | **56** | **36** | **28** | **30** | **642** |

**ಟಿಪ್ಪಣಿ;** ಪ್ರಕಟಿಸಿರುವ ಹುದ್ದೆಗಳ ಸಂಖ್ಯೆ ಮತ್ತು ವರ್ಗೀಕರಣವು ಅನಿವಾರ್ಯ ಸಂದರ್ಭಗಳಲ್ಲಿ ಸಮಿತಿಯ ನಿರ್ಣಯಕ್ಕೆ ಒಳಪಟ್ಟಿರುತ್ತದೆ.

Online ಮೂಲಕ ಅರ್ಜಿಗಳನ್ನು ಭರ್ತಿ ಮಾಡುವ ಮುನ್ನ ಅಭ್ಯರ್ಥಿಗಳು ಈ ಕೆಳಕಂಡ ಸೂಚನೆಗಳನ್ನು ಜಾಗರೂಕತೆಯಿಂದ ಓದಿಕೊಳ್ಳಲು ಸೂಚಿಸಿದೆ.

1. ಅಭ್ಯರ್ಥಿಗಳು ಆನ್ ಲೈನ್ (online) ಮೂಲಕ ಅರ್ಜಿ ಸಲ್ಲಿಸುವ ಮೊದಲು ಸಂಬಂಧಪಟ್ಟ ಅಧಿಸೂಚನೆಯನ್ನು ಓದಿಕೊಳ್ಳತಕ್ಕದ್ದು.
2. ಆನ್‌ಲೈನ್(Online) ಮೂಲಕ ಅರ್ಜಿ ಸಲ್ಲಿಸುವ ಮುನ್ನ ಅಭ್ಯರ್ಥಿಯು ತನ್ನ ಇತ್ತೀಚಿನ 35mm X 45mm ಅಳತೆಯ ಭಾವಚಿತ್ರವನ್ನು ಒಂದು ಹಾಳೆಯ ಮೇಲೆ ಅಂಟಿಸಿ ಅದರ ಕೆಳಗೆ ಕಪ್ಪು ಶಾಹಿಯ ಪೆನ್‌ನಲ್ಲಿ ಸಹಿ ಮಾಡಿ ಅದನ್ನು scan ಮಾಡಿ JPG Format ನಲ್ಲಿ save ಮಾಡಿಕೊಳ್ಳುವುದು. Save ಆಗಿರುವ ಸಹಿ ಸಮೇತ ಭಾವಚಿತ್ರದ ಗಾತ್ರ (size) 100 kb ಮೀರಬಾರದು.
3. ಆನ್‌ಲೈನ್ (online) ಮೂಲಕ ಅರ್ಜಿ ಸಲ್ಲಿಸಲು SUBMIT FRESH APPLICATION ಎಂಬ ಲಿಂಕನ್ನು ಕ್ಲಿಕ್ ಮಾಡಬೇಕು. ಕಂಪ್ಯೂಟರ್ ಪರದೆಯ ಮೇಲೆ ಮೂಡುವ ಅರ್ಜಿಯ ನಮೂನೆಯಲ್ಲಿ ವಿವರಗಳನ್ನು ಭರ್ತಿಮಾಡುವುದು ಹಾಗೂ scan ಮಾಡಿಟ್ಟುಕೊಂಡಿರುವ ಸಹಿ ಸಮೇತದ ಭಾವಚಿತ್ತವನ್ನು upload ಮಾಡುವುದು.
4. ಅರ್ಜಿ ವಿವರಗಳನ್ನು ನಮೂದಿಸಿದ ನಂತರ ಒಮ್ಮೆ ಪರಿಶೀಲಿಸಲು preview ನ್ನು ಕ್ಲಿಕ್ ಮಾಡಬೇಕು. ನಮೂದಿಸಿರುವ ವಿವರಗಳನ್ನು ಬದಲಾಯಿಸಲು edit ನ್ನು ಕ್ಲಿಕ್ ಮಾಡಬೇಕು. preview ಮಾಡದೇ ಅರ್ಜಿಯನ್ನು ಸಲ್ಲಿಸಲು ಸಾಧ್ಯವಿಲ್ಲ.
5. ಅರ್ಜಿಯಲ್ಲಿ ಸಲ್ಲಿಸಿರುವ ವಿವರಗಳು ತಪ್ಪಿದಲ್ಲಿ, preview ಕ್ಲಿಕ್ ಮಾಡಿದ ತಕ್ಷಣವೇ ತಪ್ಪುಗಳು ಪರದೆಯ ಮೇಲೆ ಮೂಡುತ್ತವೆ ಹಾಗೂ ತಪ್ಪನ್ನು ಸರಿಪಡಿಸಿದ ನಂತರ preview ಮಾಡಲು ಸಾಧ್ಯವಾಗುತ್ತದೆ.

6. ಅರ್ಜಿಯನ್ನು ಸಲ್ಲಿಸಿದ **(SUBMIT)** ನಂತರ **Appication No**. ಮತ್ತು **Password** ಕಂಪ್ಯೂಟರ್ ಪರದೆಯ ಮೇಲೆ ಮೂಡುತ್ತದೆ. ಅಭ್ಯರ್ಥಿಗಳು ಈ ವಿವರಗಳನ್ನು ಮುಂದಿನ ಉಪಯೋಕ್ಕಾಗಿ ಭದ್ರವಾಗಿ ಬರೆದಿಟ್ಟುಕೊಳ್ಳತಕ್ಕದ್ದು.

7. ಅರ್ಜಿಯ ಶುಲ್ಕವನ್ನು ಭರ್ತಿ ಮಾಡಲು ಬೇಕಾದ ಬ್ಯಾಂಕ್ ಚಲನ್‌ನನ್ನು ಮುದ್ರಿಸಲು **Generate Bank Challan** ಅನ್ನು ಕ್ಲಿಕ್ ಮಾಡಬೇಕು. ಬರೆದಿಟ್ಟುಕೊಂಡಿರುವ Password ಅಥವಾ ಅರ್ಜಿ ಸಂಖ್ಯೆ **(Application ID)** ಮತ್ತು ಜನ್ಮ ದಿನಾಂಕದ ವಿವರಗಳನ್ನು ನಮೂದಿಸಿದ ನಂತರ ಚಲನ್ ಕಂಪ್ಯೂಟರ್ ಪರದೆಯ ಮೇಲೆ ಮೂಡುತ್ತದೆ. ಅದನ್ನು ಮುದ್ರಿಸಿಕೊಳ್ಳತಕ್ಕದ್ದು.

8. ನಿಗದಿತ ಶುಲ್ಕವನ್ನು ಸ್ಟೇಟ್ ಬ್ಯಾಂಕ್ ಆಫ್ ಇಂಡಿಯಾ ಬ್ಯಾಂಕ್‌ನ ಯಾವುದೇ ಶಾಖೆಗಳಲ್ಲಿ ಚಲನ್ ನೀಡಿ ಹಣ ಪಾವತಿಸತಕ್ಕದ್ದು. ಈ ಸಂಬಂಧ **Online** ನಲ್ಲಿ ಅರ್ಜಿಯನ್ನು ಸಲ್ಲಿಸಿ ಬ್ಯಾಂಕಿನ ಚಲನ್‌ನ್ನು **download** ಮಾಡಿಕೊಂಡು ನಿಗದಿಪಡಿಸಿದ ಮೊಬಲಗನ್ನು ಸಂಬಂಧಿಸಿದ ಬ್ಯಾಂಕಿಗೆ ನಿಗದಿಪಡಿಸಿದ ಕೊನೆಯ ದಿನಾಂಕದೊಳಗಾಗಿ ಪಾವತಿಸತಕ್ಕದ್ದು. ಇದನ್ನು ಹೊರತುಪಡಿಸಿ, ಡಿ.ಡಿ / ಪೋಸ್ಟಲ್ ಆರ್ಡರ್ / ಮನಿ ಆರ್ಡರ್ ಇವುಗಳನ್ನು ಸ್ವೀಕರಿಸಲಾಗುವುದಿಲ್ಲ.

9. ಭರ್ತಿ ಮಾಡಿದ ವಿವರಗಳನ್ನು ಅರ್ಜಿ ನಮೂನೆಯಲ್ಲಿ ಮುದ್ರಿಸಿಕೊಳ್ಳಲು **Print Application** ಅನ್ನು ಕ್ಲಿಕ್ ಮಾಡಬೇಕು.

10. ಅರ್ಜಿ ಸಂಖ್ಯೆಯನ್ನು **(Application ID)** ನಮೂದಿಸಿದ ನಂತರ ಭರ್ತಿ ಮಾಡಿರುವ ಅರ್ಜಿಯು ಕಂಪ್ಯೂಟರ್ ಪರದೆಯ ಮೇಲೆ ಮೂಡುತ್ತದೆ. ಅದರ ಪ್ರಿಂಟನ್ನು ತೆಗೆದಿಟ್ಟುಕೊಳ್ಳತಕ್ಕದ್ದು.

11. ಅಭ್ಯರ್ಥಿಗಳು ಮೇಲಿನ ಸೂಚನೆಗಳನ್ನು ಜಾಗರೂಕತೆಯಿಂದ ಓದಿಕೊಂಡು ಅರ್ಜಿಯನ್ನು **Online** ಮೂಲಕ ತುಂಬತಕ್ಕದ್ದು.

12. ಅಭ್ಯರ್ಥಿಗಳು ಇಲಾಖೆಯ ವೆಬ್‌ಸೈಟ್ ವಿಳಾಸ **http://ahvs.kar.nic.in** ನಲ್ಲಿ **"ON LINE APPLICATION"** ಅನ್ನು ಕ್ಲಿಕ್ ಮಾಡಿ ಅದರಲ್ಲಿ ಬಿತ್ತರಿಸಲಾಗಿರುವ ಅರ್ಜಿ ನಮೂನೆಯಲ್ಲಿಯೇ ಅವರ ವಿವರಗಳನ್ನು ಭರ್ತಿ ಮಾಡಬೇಕು. ಈ ಅರ್ಜಿ ನಮೂನೆಯನ್ನು ಭರ್ತಿ ಮಾಡುವ ಮುನ್ನ ಇದರೊಂದಿಗೆ ನೀಡಲಾಗುವ ಸೂಚನೆಗಳನ್ನು ಓದಿಕೊಂಡು ಜಾಗರೂಕತೆಯಿಂದ ಅರ್ಜಿಯನ್ನು ಭರ್ತಿ ಮಾಡಬೇಕು. ಅಭ್ಯರ್ಥಿಗಳು **ON LINE** ಮೂಲಕ ಅರ್ಜಿಗಳನ್ನು ನಿಗದಿಪಡಿಸಿದ ಕೊನೆಯ ದಿನಾಂಕದೊಳಗೆ ಭರ್ತಿ ಮಾಡತಕ್ಕದ್ದು. ಕೊನೆಯ ದಿನಾಂಕದವರೆಗೆ ಕಾಯದೇ ಸರ್ವರ್(Server)ಜಾಮ್ ಆಗಿ ಅಂತರ್ಜಾಲ(Internet)ಸಂಪರ್ಕ ಕಡಿತಗೊಂಡು ಸಿಗದೇ ಇರುವ ಸಂಭವ ಇರುವುದರಿಂದ ಮುಂಚಿತವಾಗಿ ಅರ್ಜಿಗಳನ್ನು ಭರ್ತಿ ಮಾಡಿ ಶುಲ್ಕವನ್ನು ಪಾವತಿಸತಕ್ಕದ್ದು.

13. **ಅರ್ಜಿಗಳನ್ನು ಆನ್-ಲೈನ್ (ON LINE) (ಎಲೆಕ್ಟ್ರಾನಿಕ್ ಮಾರ್ಗ) ಮುಖಾಂತರ ಮಾತ್ರ ಸಲ್ಲಿಸತಕ್ಕದ್ದು, ಅರ್ಜಿಗಳನ್ನು ಖುದ್ದಾಗಿ ಅಥವಾ ಅಂಚೆ ಮೂಲಕ ಪ್ರತ್ಯೇಕವಾಗಿ ಸಲ್ಲಿಸಲು ಅವಕಾಶವಿರುವುದಿಲ್ಲ**.

    ಅ) ಅಭ್ಯರ್ಥಿಗಳು ಯಾವುದೇ ತಪ್ಪು ಮಾಹಿತಿಯನ್ನು ನೀಡದೇ ಅರ್ಜಿ ಭರ್ತಿ ಮಾಡಲು **ON LINE** ನಲ್ಲಿ ನೀಡಿರುವ ಸೂಚನೆಗಳನ್ವಯ ಭರ್ತಿ ಮಾಡತಕ್ಕದ್ದು.

    ಆ) ತಪ್ಪು ಮಾಹಿತಿಯನ್ನು ನೀಡಿ ಅರ್ಜಿ ಸಲ್ಲಿಸಿದ್ದಲ್ಲಿ, ಅಂತಹವರ ವಿರುದ್ಧ ಇಲಾಖಾ ಕಾನೂನಿನನ್ವಯ ಸೂಕ್ತ ಕ್ರಮ ಕೈಗೊಳ್ಳಲಾಗುವುದು.

II. ಅರ್ಜಿಯಲ್ಲಿ ಮೀಸಲಾತಿಗೆ ಸಂಬಂಧಿಸಿದ ಅಂಕಣದಲ್ಲಿ ಉಪಯೋಗಿಸಿದ ಪದಗಳ ಅರ್ಥವನ್ನು ಈ ಕೆಳಕಂಡಂತೆ ಅರ್ಥೈಸಿಕೊಳ್ಳಬೇಕು:-

| | |
|---|---|
| SC | Scheduled Caste |
| ST | Scheduled Tribe |
| C-I | Cat-I |
| C-II(a) | Cat-II(a) |
| C-II (b) | Cat-II(b) |
| C-III(a) | Cat-III(a) |
| C-III(b) | Cat-III(b) |
| GM | General Merit |
| Ex-MP | Ex-Military Person |
| Rural | Rural Reservation |
| KMS | Kannada Medium |
| PH | Physically Handicapped |
| PDP | Project Displaced Person |

ಪ್ರಕಟಿಸಿರುವ ಹುದ್ದೆಗಳಿಗೆ ನಿಗದಿಪಡಿಸಿರುವ ವಿದ್ಯಾರ್ಹತೆ, ವಯೋಮಿತಿ, ಮೀಸಲಾತಿ ಇತ್ಯಾದಿ ದಾಖಲೆಗಳನ್ನು **ON LINE** ಮುಖಾಂತರ ಅರ್ಜಿಗಳನ್ನು ಸ್ವೀಕರಿಸಲು ನಿಗದಿಪಡಿಸಿರುವ ಕೊನೆಯ ದಿನಾಂಕಕ್ಕೆ ಮೊದಲು ಸಂಬಂಧಪಟ್ಟ ಪ್ರಾಧಿಕಾರದಿಂದ ಪಡೆದು ಅಭ್ಯರ್ಥಿಗಳು ಹೊಂದಿರಬೇಕು.

**III** **ನಿಗದಿಪಡಿಸಿದ ಶುಲ್ಕ ಮತ್ತು ಪಾವತಿಸಬೇಕಾದ ವಿಧಾನ:-**

| | |
|---|---|
| ಸಾಮಾನ್ಯ ಅಭ್ಯರ್ಥಿ, ಪ್ರವರ್ಗ 2(ಎ), 2(ಬಿ), 3(ಎ), 3(ಬಿ)ಗೆ ಸೇರಿದ ಅಭ್ಯರ್ಥಿಗಳಿಗೆ | ರೂ:300/- |
| ಪರಿಶಿಷ್ಟ ಜಾತಿ, ಪರಿಶಿಷ್ಟ ಪಂಗಡ, ಪ್ರವರ್ಗ-1ಕ್ಕೆ ಸೇರಿದ ಅಭ್ಯರ್ಥಿಗಳಿಗೆ | ರೂ:150/- |

ಅಭ್ಯರ್ಥಿಗಳು **ON LINE** ಮೂಲಕ ಅರ್ಜಿ ಭರ್ತಿ ಮಾಡುವ ಮೊದಲು ಸೂಚನೆಗಳನ್ನು ಕಡ್ಡಾಯವಾಗಿ ಓದಿ ತಿಳಿದುಕೊಳ್ಳತಕ್ಕದ್ದು.

(i) ಅಭ್ಯರ್ಥಿಗಳು ಅರ್ಜಿ ಸಲ್ಲಿಸಲು ನಿಗದಿಪಡಿಸಿದ ಕೊನೆಯ ದಿನಾಂಕದವರೆಗೂ ಕಾಯದೇ, ವಿಳಂಬ ಮಾಡದೇ ಮುಂಚಿತವಾಗಿ ಅರ್ಜಿಗಳನ್ನು ಸಲ್ಲಿಸತಕ್ಕದ್ದು. ಒಮ್ಮೆ ಶುಲ್ಕವನ್ನು ಪಾವತಿಸಿದ ನಂತರ ಅದನ್ನು ಯಾವುದೇ ಸಂದರ್ಭದಲ್ಲಿಯೂ ಹಿಂದಿರುಗಿಸಲಾಗುವುದಿಲ್ಲ ಅಥವಾ ಇತರೆ ಯಾವುದೇ ಪರೀಕ್ಷೆ ಅಥವಾ ನೇಮಕಾತಿಗಳಿಗೆ ಹೊಂದಿಸಿಕೊಳ್ಳಲಾಗುವುದಿಲ್ಲ.

**ಅರ್ಜಿ ಸಲ್ಲಿಸಲು ಪ್ರಾರಂಭ ದಿನಾಂಕ:06-12-2012**

**ಅರ್ಜಿ ಸಲ್ಲಿಸಲು ಕೊನೆಯ ದಿನಾಂಕ:07-01-2013(ಸಂಜೆ 5.00 ಗಂಟೆಯವರೆಗೆ)**

**ಬ್ಯಾಂಕ್‌ನಲ್ಲಿ ಶುಲ್ಕವನ್ನು ಪಾವತಿಸಲು ಕೊನೆಯ ದಿನಾಂಕ:10-01-2013**

**ವಿಶೇಷ ಸೂಚನೆ:-** **On-line** ಮೂಲಕ ಅರ್ಜಿಯನ್ನು ಭರ್ತಿ ಮಾಡುವ ಸಂದರ್ಭದಲ್ಲಿ ತಾಂತ್ರಿಕ ತೊಂದರೆ ಅಥವಾ ಸಮಸ್ಯೆ ಎದುರಾದಲ್ಲಿ ಸಹಾಯವಾಣಿ (Help line 22862767 (Extn. No.310) ರಲ್ಲಿ ಬೆಳಗ್ಗೆ 10.00 ಗಂಟೆಯಿಂದ ಸಂಜೆ 5.00 ಗಂಟೆಯವರೆಗೆ ಸಂಪರ್ಕಿಸಿ ಅಗತ್ಯ ಮಾಹಿತಿ ಪಡೆದು ಅರ್ಜಿ ಸಲ್ಲಿಸಬಹುದು.(ಭಾನುವಾರ ಮತ್ತು ಇತರೆ ಸರ್ಕಾರಿ ರಜಾ ದಿನಗಳನ್ನು ಹೊರತುಪಡಿಸಿ)

**IV** **<u>ಅರ್ಹತಾ ಷರತ್ತುಗಳು</u>:-**

ಅ) ಭಾರತೀಯ ನಾಗರೀಕನಾಗಿರತಕ್ಕದ್ದು.

ಆ) ಒಬ್ಬ ಜೀವಂತ ಪತ್ನಿಗಿಂತ ಹೆಚ್ಚುಮಂದಿ ಪತ್ನಿಯರನ್ನು ಹೊಂದಿರುವ ಪುರುಷ ಅಭ್ಯರ್ಥಿ ಮತ್ತು ಈಗಾಗಲೇ ಇನ್ನೊಬ್ಬ ಹೆಂಡತಿ ಇರುವ ವ್ಯಕ್ತಿಯನ್ನು ಮದುವೆಯಾಗಿರುವ ಮಹಿಳಾ ಅಭ್ಯರ್ಥಿಯು ಸರ್ಕಾರದಿಂದ ಪೂರ್ವಾನುಮತಿಯನ್ನು ಪಡೆಯದೇ ನೇಮಕಾತಿಗೆ ಅರ್ಹರಾಗುವುದಿಲ್ಲ.

ಇ) ಅಭ್ಯರ್ಥಿಯು ಮಾನಸಿಕವಾಗಿ ಮತ್ತು ದೈಹಿಕವಾಗಿ ಆರೋಗ್ಯವಂತರಾಗಿರಬೇಕು ಮತ್ತು ಅವರ ನೇಮಕಾತಿಯು ಕರ್ತವ್ಯಗಳ ದಕ್ಷ ನಿರ್ವಹಣೆಗೆ ಆತಂಕವನ್ನುಂಟು ಮಾಡುವ ಸಂಭವ ಇರುವ ಯಾವುದೇ ದೈಹಿಕ ನ್ಯೂನತೆಯಿಂದ ಮುಕ್ತರಾಗಿರಬೇಕು.

ಈ) ದೈಹಿಕವಾಗಿ ಅನರ್ಹರಾಗಿದ್ದಾರೆಂದು ವೈದ್ಯಕೀಯ ಮಂಡಳಿಯು ನೀಡಿದ ವರದಿಯ ಮೇಲೆ ಅನರ್ಹರೆಂಬುದಾಗಿ ತಿರಸ್ಕರಿಸುವ ಪೂರ್ಣ ವಿವೇಚನೆಯನ್ನು ಸಮಿತಿಯು ಕಾದಿರಿಸಿಕೊಂಡಿದೆ ಮತ್ತು ಸರ್ಕಾರದ ವಿವೇಚನೆಯು ಯಾವುದೇ ವಿಧದಲ್ಲೂ ಈ ನಿಯಮಗಳ ಮೂಲಕ ಸೀಮಿತವಾಗಿರುವುದಿಲ್ಲ. ಅಂಗವಿಕಲರು ಯಾವುದೇ ಹುದ್ದೆಗೆ ನಿಗದಿಪಡಿಸಿದ ಕರ್ತವ್ಯ ಮತ್ತು ಜವಾಬ್ದಾರಿಯನ್ನು ನಿರ್ವಹಿಸಲು ದೈಹಿಕವಾಗಿ ಸಮರ್ಥರೇ ಎಂಬುದನ್ನು ನೇಮಕಾತಿ ಸಮಿತಿ ಪರಿಶೀಲಿಸಿ ಧೃಡೀಕರಿಸಿದ ನಂತರವೇ ಅಭ್ಯರ್ಥಿಯ ಆಯ್ಕೆಯನ್ನು ಪರಿಗಣಿಸಲಾಗುವುದು.

**V** **<u>ಶೈಕ್ಷಣಿಕ ವಿದ್ಯಾರ್ಹತೆ</u>:-**ಅರ್ಜಿಗಳನ್ನು ಭರ್ತಿ ಮಾಡಲು ನಿಗದಿಪಡಿಸಿದ ಕೊನೆಯ ದಿನಾಂಕದಂದು ಅನುಸೂಚಿಯಲ್ಲಿ ಅಧಿಸೂಚಿಸಿದ ಹುದ್ದೆಯ ಮುಂದೆ ಸೂಚಿಸಿರುವ ವಿದ್ಯಾರ್ಹತೆಯನ್ನು ಅಭ್ಯರ್ಥಿಗಳು ಕಡ್ಡಾಯವಾಗಿ ಹೊಂದಿರಬೇಕು. ಹುದ್ದೆಗೆ ನಿಗದಿಪಡಿಸಿರುವ ವಿದ್ಯಾರ್ಹತೆಯನ್ನು ಅಭ್ಯರ್ಥಿಗಳು **On-line** ಅರ್ಜಿಯಲ್ಲಿ ಸ್ಪಷ್ಟವಾಗಿ ನಮೂದಿಸಬೇಕು.

**VI** **<u>ವಯೋಮಿತಿ</u>:-**ಅಭ್ಯರ್ಥಿಗಳು ಅರ್ಜಿಗಳನ್ನು ಸಲ್ಲಿಸಲು ನಿಗದಿಪಡಿಸಿದ ಕೊನೆಯ ದಿನಾಂಕದಂದು ಅಭ್ಯರ್ಥಿಗಳು ನಿಗದಿತ ಕನಿಷ್ಠ ವಯೋಮಿತಿಯನ್ನು ಹೊಂದಿರಬೇಕು ಹಾಗೂ ನಿಗದಿತ ಗರಿಷ್ಠ ವಯೋಮಿತಿಯನ್ನು ಮೀರಿರಬಾರದು.

**<u>ಈ ಕೆಳಗಿನ ಸಂದರ್ಭಗಳಲ್ಲಿ ನೇಮಕಾತಿಯ ಗರಿಷ್ಠ ವಯೋಮಿತಿಯನ್ನು ಕೆಳಗೆ ತಿಳಿಸಿರುವಷ್ಟರ ಮಟ್ಟಿಗೆ ಹೆಚ್ಚಿಸಲಾಗುವುದು</u>.**

ಅ. ಅಭ್ಯರ್ಥಿಯು ಕರ್ನಾಟಕ ರಾಜ್ಯ ಸರ್ಕಾರದಲ್ಲಿ ಅಥವಾ ಸ್ಥಳೀಯ ಪ್ರಾಧಿಕಾರದಲ್ಲಿ ಅಥವಾ ರಾಜ್ಯ ಅಧಿನಿಯಮ ಅಥವಾ ಕೇಂದ್ರ ಅಧಿನಿಯಮದ ಮೂಲಕ ಸ್ಥಾಪನೆಯಾದ ಅಥವಾ ರಾಜ್ಯ ಅಧಿನಿಯಮದ ಅಥವಾ ಕೇಂದ್ರ ಅಧಿನಿಯಮದ ಮೂಲಕ ಸ್ಥಾಪನೆಗೊಂಡು ಕರ್ನಾಟಕ ರಾಜ್ಯ ಸರ್ಕಾರದ ಸ್ವಾಮ್ಯ ಅಥವಾ ನಿಯಂತ್ರಣದಲ್ಲಿರುವ ನಿಗಮದಲ್ಲಿ ಹುದ್ದೆ ಹೊಂದಿರುವ ಅಥವಾ ಹಿಂದೆ ಹೊಂದಿದ್ದಲ್ಲಿ ಗರಿಷ್ಠ ವಯೋಮಿತಿಯನ್ನು ಅವನು/ಅವಳು ಎಷ್ಟು ವರ್ಷಗಳ ಅವಧಿಗೆ ಆ ಹುದ್ದೆಯಲ್ಲಿ ಸೇವೆ ಸಲ್ಲಿಸುತ್ತಿರುವರೋ, ಅಥವಾ ಹಿಂದೆ ಸಲ್ಲಿಸಿದ್ದರೋ ಅಷ್ಟು ವರ್ಷಗಳು ಅಥವಾ 10 ವರ್ಷಗಳ ಅವಧಿ ಅದರಲ್ಲಿ ಯಾವುದು ಕಡಿಮೆಯೋ ಅಷ್ಟು ವರ್ಷಗಳು.

ಆ. ಅಭ್ಯರ್ಥಿಯು ಮಾಜಿ ಸೈನಿಕನಾಗಿದ್ದಲ್ಲಿ, ಅವನು ಕೇಂದ್ರ ಸಶಸ್ತ್ರ ದಳದಲ್ಲಿ ಎಷ್ಟು ವರ್ಷಗಳ ಸೇವೆಯನ್ನು ಸಲ್ಲಿಸಿರುವನೋ ಅಷ್ಟು ವರ್ಷಗಳಿಗೆ ಮೂರು ವರ್ಷಗಳನ್ನು ಸೇರಿಸಿದರೆ ಎಷ್ಟು ವರ್ಷಗಳಾಗುವುದೋ ಅಷ್ಟು ವರ್ಷಗಳು. viz.,

(1) ಮಾಜಿ ಸೈನಿಕ ಎಂದರೆ, ಕೇಂದ್ರ ಸಶಸ್ತ್ರ ದಳಗಳಾದ ನಿಯಮಿತ ಭೂದಳ, ನೌಕಾದಳ ಮತ್ತು ವಾಯು ದಳದಲ್ಲಿ ಯಾವುದೇ ಶ್ರೇಣಿಯಲ್ಲಿ (ಯೋಧ ಅಥವಾ ಯೋಧನಲ್ಲದ) ಸೇವೆ ಸಲ್ಲಿಸಿದ ವ್ಯಕ್ತಿ. ಆದರೆ ಡಿಫೆನ್ಸ್ ಸೆಕ್ಯೂರಿಟಿ ಕೋರ್, ಜನರಲ್ ರಿಸರ್ವ್ ಇಂಜಿಯರಿಂಗ್ ಫೋರ್ಸ್, ಲೋಕ ಸಹಾಯಕ ಸೇವೆ ಮತ್ತು ಪ್ಯಾರಾ ಮಿಲಿಟರಿ ದಳದಲ್ಲಿ ಸೇವೆ ಸಲ್ಲಿಸಿದ ವ್ಯಕ್ತಿ ಸೇರ್ಪಡೆಯಾಗುವುದಿಲ್ಲ. ಮತ್ತು

(2) ಕೇಂದ್ರ ಸಶಸ್ತ್ರ ದಳಗಳಲ್ಲಿ ಸೇವೆ ಸಲ್ಲಿಸುವಾಗ ಕೊಲ್ಲಲ್ಪಟ್ಟ ಅಥವಾ ಶಾಶ್ವತವಾಗಿ ದೈಹಿಕ ವಿಕಲತೆ ಹೊಂದಿದ ವ್ಯಕ್ತಿಗಳ ಕುಟುಂಬದವರು (ಸಂದರ್ಭಾನುಸಾರ ಹೆಂಡತಿ ಅಥವಾ ಗಂಡ ಮತ್ತು ಮಕ್ಕಳು ಮತ್ತು ಮಲ ಮಕ್ಕಳು) ಮಾಜಿ ಸೈನಿಕ ಮೀಸಲಾತಿಗೆ ಅರ್ಹರಾಗಿರುತ್ತಾರೆ. ಆದರೆ ಅಂತಹವರುಗಳಿಗೆ ವಯೋಮಿತಿ ಸಡಿಲಿಕೆಯನ್ನು ನೀಡಲಾಗುವುದಿಲ್ಲ.

ಅ) ಅಂತಹ ಸೇವೆಯಿಂದ ನಿವೃತ್ತಿ ಹೊಂದಿದ ನಂತರ ನಿವೃತ್ತಿ ವೇತನ ಪಡೆಯುತ್ತಿರುವ

ಅಥವಾ

ಆ) ವೈದ್ಯಕೀಯ ಕಾರಣಗಳಿಂದ ಮಿಲಿಟರಿಯಿಂದ ಬಿಡುಗಡೆಯಾದ ಅಥವಾ ವ್ಯಕ್ತಿಯ ಹಿಡಿತಕ್ಕೂ ಮೀರಿದ ಪರಿಸ್ಥಿತಿಗಳಿಂದ ಮತ್ತು ವೈದ್ಯಕೀಯ ಅಥವಾ ಅಸಾಮರ್ಥ್ಯದ ಪಿಂಚಣಿ ಪಡೆದು ಅಂತಹ ಸೇವೆಯಿಂದ ಬಿಡುಗಡೆಯಾದ ವ್ಯಕ್ತಿ.

ಅಥವಾ

ಇ) ಸ್ವಂತ ಕೋರಿಕೆ ಹೊರತುಪಡಿಸಿ ಸಿಬ್ಬಂದಿ ಕಡಿತದ ಪರಿಣಾಮದಿಂದ ಅಂತಹ ಸೇವೆಯಿಂದ ಬಿಡುಗಡೆ ಹೊಂದಿದ ವ್ಯಕ್ತಿ.

ಅಥವಾ

ಈ) ತನ್ನ ಸ್ವಂತ ಕೋರಿಕೆ ಮೇರೆಗೆ ಅಥವಾ ದುರ್ನಡತೆ ಅಥವಾ ಅಸಾಮರ್ಥ್ಯದ ಕಾರಣದಿಂದಾಗಿ ತೆಗೆದುಹಾಕಿರುವ ಅಥವಾ ಕರ್ತವ್ಯದಿಂದ ವಜಾ ಮಾಡಿದ ವ್ಯಕ್ತಿಗಳನ್ನು ಹೊರತುಪಡಿಸಿ, ನಿರ್ದಿಷ್ಟ ಅವಧಿಯನ್ನು ಪೂರೈಸಿದ ತರುವಾಯ ಬಿಡುಗಡೆ ಹೊಂದಿದ ವ್ಯಕ್ತಿ ಮತ್ತು ಗ್ರಾಚ್ಯುಟಿ ಪಡೆಯುತ್ತಿರುವ ವ್ಯಕ್ತಿ ಮತ್ತು ಪ್ರಾಂತೀಯ ಸೇವೆಯ ಈ ಕೆಳಗೆ ಹೆಸರಿಸಿದ ವರ್ಗದ ಸಿಬ್ಬಂದಿಯವರು:–

1. ನಿರಂತರ ಸೇವೆ ಸಲ್ಲಿಸಿದ ನಿವೃತ್ತಿ ಹೊಂದಿದ ಪಿಂಚಣಿದಾರರು.
2. ಮಿಲಿಟರಿ ಸೇವೆಯಿಂದಾಗಿ ಉಂಟಾದ ದೈಹಿಕ ಅಸಾಮರ್ಥ್ಯತೆ ಹೊಂದಿ ಬಿಡುಗಡೆಯಾದ ವ್ಯಕ್ತಿ.
3. ಗ್ಯಾಲಂಟಿ ಪ್ರಶಸ್ತಿ ವಿಜೇತರು.

**<u>ವಿವರಣೆ</u>**:– ಕೇಂದ್ರ ಸಶಸ್ತ್ರ ದಳದಲ್ಲಿ ಸೇವೆಯಲ್ಲಿರುವ ವ್ಯಕ್ತಿಗಳು ಸೇವೆಯಿಂದ ನಿವೃತ್ತಿ ಹೊಂದಿದ ನಂತರ ಮಾಜಿ ಸೈನಿಕರ ವರ್ಗದಡಿ ಬರುವ ವ್ಯಕ್ತಿಗೆ ನಿರ್ದಿಷ್ಟ ಒಪ್ಪಂದವು ಪೂರ್ಣವಾಗಲು ಒಂದು ವರ್ಷಕ್ಕೆ ಮುನ್ನ ಪುನರ್ ಉದ್ಯೋಗಕ್ಕೆ ಅರ್ಜಿ ಹಾಕಿಕೊಳ್ಳಲು ಹಾಗೂ ಅವರಿಗೆ ಮಾಜಿ ಸೈನಿಕರಿಗೆ ದೊರೆಯುವ ಎಲ್ಲಾ ಸೌಲಭ್ಯಗಳನ್ನು ಹೊಂದಲು ಅನುಮತಿ ನೀಡಲಾಗಿದೆ. ಆದರೆ ಸಮವಸ್ತ್ರವನ್ನು ತ್ಯಜಿಸಲು ಅನುಮತಿ ನೀಡುವವರೆಗೆ ರಾಜ್ಯ ನಾಗರೀಕ ಸೇವಾ ಅಥವಾ ಹುದ್ದೆಗೆ ನೇಮಕ ಹೊಂದುವಂತಿಲ್ಲ.

ಉ) ಅಭ್ಯರ್ಥಿಯು ವಿಧವೆಯಾಗಿದ್ದಲ್ಲಿ, 10 ವರ್ಷಗಳು.

ಊ) ಅಭ್ಯರ್ಥಿಯು ಅಂಗವಿಕಲನಾಗಿದ್ದರೆ 10 ವರ್ಷಗಳು.

(ಋ) ಅಭ್ಯರ್ಥಿಯು ಕರ್ನಾಟಕ ರಾಜ್ಯದಲ್ಲಿರುವ ಭಾರತ ಸರ್ಕಾರದ ಜನಗಣತಿ ಸಂಸ್ಥೆಯಲ್ಲಿ ಈಗ ಹುದ್ದೆಯನ್ನು ಹೊಂದಿದ್ದರೆ ಅಥವಾ ಹಿಂದೆ ಹೊಂದಿದ್ದ ಪಕ್ಷದಲ್ಲಿ ಗರಿಷ್ಠ ವಯೋಮಿತಿಯನ್ನು ಅವನು / ಅವಳು ಎಷ್ಟು ವರ್ಷಗಳ ಅವಧಿಗೆ ಆ ಹುದ್ದೆಯಲ್ಲಿ ಸೇವೆ ಸಲ್ಲಿಸುತ್ತಿರುವರೋ ಅಥವಾ ಹಿಂದೆ ಸಲ್ಲಿಸಿದ್ದರೋ ಅಷ್ಟು ವರ್ಷಗಳು ಅಥವಾ 5 ವರ್ಷಗಳ ಅವಧಿ ಅದರಲ್ಲಿ ಯಾವುದು ಕಡಿಮೆಯೋ ಅಷ್ಟು ವರ್ಷಗಳು.

(ಎ) ಅಭ್ಯರ್ಥಿಯು ಜೀತ ಕಾರ್ಮಿಕನಾಗಿದ್ದ ಪಕ್ಷದಲ್ಲಿ 10 ವರ್ಷಗಳು.

ಉಪ ಕಂಡಿಕೆ 7(ಖು) ರ ಮೇರೆಗೆ ವಯೋಮಿತಿಯ ಸಡಿಲಿಕೆಯನ್ನು ಕೋರುವ ಅಭ್ಯರ್ಥಿಯು ಜೀತ ವಿಮುಕ್ತನಾಗಿದ್ದು, ಸದರಿ ಅಧಿನಿಯಮ ಅಥವಾ 1957 ರ ಕರ್ನಾಟಕ ಜೀತ ಕಾರ್ಮಿಕ ಪದ್ಧತಿ (ರದ್ದಿಯಾತಿ) ಆದೇಶದ ಮೇರೆಗೆ ಜೀತ ಸಾಲವನ್ನು ಸಂದಾಯ ಮಾಡುವ ಹೊಣೆಯಿಂದ ಬಿಡುಗಡೆಯಾಗಿದ್ದಾನೆಂದು ಪ್ರಮಾಣ ಪತ್ರವನ್ನು ಜಿಲ್ಲಾ ಮ್ಯಾಜಿಸ್ಟ್ರೇಟ್‌ರಿಂದ ಪಡೆದು ಅರ್ಜಿಯೊಂದಿಗೆ ಲಗತ್ತಿಸಬೇಕು.

VII **ಜಾತಿ / ಮೀಸಲಾತಿ ಪ್ರಮಾಣ ಪತ್ರಗಳು** :-

**ಮೀಸಲಾತಿ ಕೋರಬಯಸುವ ಅಭ್ಯರ್ಥಿಗಳು ಈ ಕೆಳಗೆ ನಮೂದಿಸಿರುವ ನಮೂನೆಗಳಲ್ಲಿಯೇ ಮೀಸಲಾತಿ ಪ್ರಮಾಣ ಪತ್ರಗಳನ್ನು ಪಡೆದಿಟ್ಟುಕೊಂಡಿರತಕ್ಕದ್ದು:-**

ಅ) **ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡಕ್ಕೆ ಸೇರಿದ ಅಭ್ಯರ್ಥಿಗಳು:-** ನಮೂನೆ 'ಡಿ' (ಅನುಬಂಧ-1)

ಆ) **ಪ್ರವರ್ಗ-1 ಕ್ಕೆ ಸೇರಿದ ಅಭ್ಯರ್ಥಿಗಳು:-** ನಮೂನೆ 'ಇ' (ಅನುಬಂಧ-1)

ಇ) **ಪ್ರವರ್ಗ-2ಎ, 2ಬಿ, 3ಎ ಮತ್ತು 3ಬಿ ಮೀಸಲಾತಿಗೆ ಸೇರಿದ ಅಭ್ಯರ್ಥಿಗಳು:-** ನಮೂನೆ 'ಎಫ್' (ಅನುಬಂಧ-3)

ಅರ್ಜಿ ಸಲ್ಲಿಸಲು ನಿಗದಿಪಡಿಸಿದ ಕೊನೆಯ ದಿನಾಂಕದಂದು ಚಾಲ್ತಿಯಲ್ಲಿರುವ ಮೀಸಲಾತಿ ಪ್ರಮಾಣ ಪತ್ರವನ್ನು ಸಂಬಂಧಿತ ತಹಸೀಲ್ದಾರ್‌ರವರಿಂದ ಪಡೆದಿಟ್ಟುಕೊಂಡಿರತಕ್ಕದ್ದು. ಅಂದರೆ ಹಿಂದುಳಿದ ವರ್ಗಗಳ ಪ್ರವರ್ಗ-2ಎ, ಪ್ರವರ್ಗ-2ಬಿ, ಪ್ರವರ್ಗ-3ಎ, 3ಬಿ ಮೀಸಲಾತಿ ಪ್ರಮಾಣ ಪತ್ರಗಳನ್ನು ಪಡೆದ ದಿನಾಂಕದಿಂದ ಅರ್ಜಿಗಳನ್ನು ಸಲ್ಲಿಸಲು ನಿಗದಿಪಡಿಸಿದ ಕೊನೆಯ ದಿನಾಂಕದವರೆಗೆ ಐದು ವರ್ಷಗಳ ಅವಧಿಯೊಳಗಿರಬೇಕು. ಮೂಲ ದಾಖಲಾತಿ ಪರಿಶೀಲನಾ ಸಮಯದಲ್ಲಿ ತಪ್ಪದೇ ಹಾಜರುಪಡಿಸತಕ್ಕದ್ದು. ತಪ್ಪಿದ್ದಲ್ಲಿ, ಅಂತಹ ಅಭ್ಯರ್ಥಿಯ ಮೀಸಲಾತಿಯನ್ನು ರದ್ದುಪಡಿಸಿ ಅವರ ಅಭ್ಯರ್ಥಿತನವನ್ನು ಅರ್ಹರಾದಲ್ಲಿ ಮಾತ್ರ ಸಾಮಾನ್ಯ ಅರ್ಹತೆಯಡಿಯಲ್ಲಿ ಪರಿಗಣಿಸಲಾಗುವುದು. ಈ ಪ್ರಮಾಣ ಪತ್ರಗಳ ನಮೂನೆಗಳನ್ನು ಈ ಸೂಚನೆಗಳಲ್ಲಿ ತೋರಿಸಲಾಗಿದೆ. ಮೀಸಲಾತಿ ಪ್ರಮಾಣ ಪತ್ರ ಜಾರಿ ಮಾಡಿದ ದಿನಾಂಕವನ್ನು ತಪ್ಪದೇ ಅರ್ಜಿಯಲ್ಲಿ ಸಂಬಂಧಪಟ್ಟ ಅಂಕಣದಲ್ಲಿ ನಮೂದಿಸತಕ್ಕದ್ದು ಹಾಗೂ ಅದೇ ಪ್ರಮಾಣ ಪತ್ರವನ್ನು ಮೂಲ ದಾಖಲಾತಿ ಪರಿಶೀಲನಾ ಸಮಯದಲ್ಲಿ ಹಾಜರುಪಡಿಸತಕ್ಕದ್ದು. ಈ ನಮೂನೆಗಳನ್ನು ಹೊರತುಪಡಿಸಿ ಇತರೆ ಯಾವುದೇ ನಮೂನೆಗಳಲ್ಲಿ ಸಲ್ಲಿಸಲ್ಪಡುವ ಮೀಸಲಾತಿ ಪ್ರಮಾಣ ಪತ್ರಗಳನ್ನು ತಿರಸ್ಕರಿಸಲಾಗುವುದು.

VIII **ಗ್ರಾಮೀಣ ಅಭ್ಯರ್ಥಿ:**-ಸರ್ಕಾರಿ ಆದೇಶ ಸಂಖ್ಯೆ:ಸಿಆಸುಇ-96:ಸೆನೆನಿ:2005, ದಿನಾಂಕ: 10-08-2005 ರನ್ವಯ ಗ್ರಾಮೀಣ ಮೀಸಲಾತಿಯನ್ನು ಕೋರುವ ಅಭ್ಯರ್ಥಿಗಳು ಪ್ರಸ್ತುತ ಚಾಲ್ತಿಯಲ್ಲಿರುವ ನಿಯಮಗಳ ರೀತ್ಯಾ 1 ರಿಂದ 10ನೇ ತರಗತಿಯವರೆಗೆ ಗ್ರಾಮೀಣ ಮೀಸಲಾತಿಗೆ ಒಳಪಡುವ ಪ್ರದೇಶಗಳಲ್ಲಿ ವ್ಯಾಸಂಗ ಮಾಡಿ ಉತ್ತೀರ್ಣರಾಗಿರುವವರು ಈ ಮೀಸಲಾತಿಯನ್ನು ಪಡೆಯಲು ಅರ್ಹರು. ಗ್ರಾಮೀಣ ಅಭ್ಯರ್ಥಿಗಳೆಂದು ಮೀಸಲಿರಿಸಿದ ಹುದ್ದೆಗಳನ್ನು ಕ್ಲೇಮ್ ಮಾಡುವ ಅಭ್ಯರ್ಥಿಗಳು ನಮೂನೆ-2ನ್ನು ಸಂಬಂಧಪಟ್ಟ ಕ್ಷೇತ್ರದ ಶಿಕ್ಷಣಾಧಿಕಾರಿಯವರ ಮೇಲು ರುಜುವಿನೊಂದಿಗೆ ಹಾಗೂ ಸಾಮಾನ್ಯ ಅರ್ಹತೆಯ ಗ್ರಾಮೀಣ ಮೀಸಲಾತಿ ಬಯಸುವ ಅಭ್ಯರ್ಥಿಗಳು ಮೇಲುಸ್ಥರಕ್ಕೆ ಸೇರಿಲ್ಲದಿರುವ ಬಗ್ಗೆ ನಮೂನೆ-1 ರಲ್ಲಿ ಪ್ರಮಾಣ ಪತ್ರವನ್ನು ಕಡ್ಡಾಯವಾಗಿ ಸಂಬಂಧಿತ ತಹಶೀಲ್ದಾರ್‌ರವರಿಂದ ಪಡೆದಿಟ್ಟುಕೊಂಡಿರತಕ್ಕದ್ದು. ಅಂತೆಯೇ ಗ್ರಾಮೀಣ ಮೀಸಲಾತಿ ಕೋರುವ ಪರಿಶಿಷ್ಟ ಜಾತಿ, ಪರಿಶಿಷ್ಟ ಪಂಗಡ, ಪ್ರವರ್ಗ-2ಎ, ಪ್ರವರ್ಗ-2ಬಿ, ಪ್ರವರ್ಗ-3ಎ, 3ಬಿ ಮೀಸಲಾತಿಗೆ ಸೇರಿದ ಅಭ್ಯರ್ಥಿಗಳು ಕಡ್ಡಾಯವಾಗಿ ಗ್ರಾಮೀಣ ಮೀಸಲಾತಿಯ ಪ್ರಮಾಣ ಪತ್ರವನ್ನು ನಮೂನೆ-2 ರಲ್ಲಿ ಸಂಬಂಧಪಟ್ಟ ಕ್ಷೇತ್ರ ಶಿಕ್ಷಣಾಧಿಕಾರಿಯವರ ಮೇಲು ರುಜು ಮಾಡಿಸಿ ಪಡೆದಿಟ್ಟುಕೊಂಡಿರತಕ್ಕದ್ದು. ಮೂಲ ದಾಖಲಾತಿ ಪರಿಶೀಲನೆಗೆ ತಪ್ಪದೇ ಹಾಜರುಪಡಿಸತಕ್ಕದ್ದು. ತಪ್ಪಿದಲ್ಲಿ ಅಂತಹ ಅಭ್ಯರ್ಥಿಗಳ ಮೀಸಲಾತಿಯನ್ನು ರದ್ದುಪಡಿಸಲಾಗುವುದು. (ಇತರೆ ನಮೂನೆಗಳಲ್ಲಿ ಸಲ್ಲಿಸಲ್ಪಡುವ ಮೀಸಲಾತಿ ಪ್ರಮಾಣ ಪತ್ರಗಳನ್ನು

ತಿರಸ್ಕರಿಸಲಾಗುವುದು ಹಾಗೂ ಅಂತಹವರು ಗ್ರಾಮೀಣ ಮೀಸಲಾತಿಗೆ ಸಹ ಅನರ್ಹರಾಗುತ್ತಾರೆ. ಈ ಪ್ರಮಾಣ ಪತ್ರಗಳ ನಮೂನೆಗಳನ್ನು ಈ ಸೂಚನೆಗಳಿಗೆ ಅನುಬಂಧಿಸಲಾಗಿದೆ) **(ಅನುಬಂಧ-4)**.

ಜನರಲ್ ಮೆರಿಟ್ ಅಭ್ಯರ್ಥಿಗಳು ಮೇಲುಸ್ಥರಕ್ಕೆ ಸೇರಿಲ್ಲವೆಂದು ದೃಢೀಕರಿಸಲು ಗ್ರಾಮೀಣ ಮೀಸಲಾತಿಯನ್ನು ಕೋರಲು ಸಲ್ಲಿಸಬೇಕಾದ ಪ್ರಮಾಣ ಪತ್ರ ನಮೂನೆ-1.

IX **ಕನ್ನಡ ಮಾಧ್ಯಮ ಅಭ್ಯರ್ಥಿ**:- ಸರ್ಕಾರಿ ಆದೇಶ ಸಂಖ್ಯೆ:ಸಿಆಸುಇ-71:ಸೆನೆನಿ:2001, ದಿನಾಂಕ: 24-10-2002 ರನ್ವಯ ಕನ್ನಡ ಮಾಧ್ಯಮದ ಅಭ್ಯರ್ಥಿಗಳೆಂದು ಮೀಸಲರಿಸಿದ ಹುದ್ದೆಗಳನ್ನು ಕ್ಲೇಮು ಮಾಡುವ ಅಭ್ಯರ್ಥಿಗಳು 1ನೇ ತರಗತಿಯಿಂದ 10ನೇ ತರಗತಿಯವರೆಗೆ ಕನ್ನಡ ಮಾಧ್ಯಮದಲ್ಲಿ ವ್ಯಾಸಂಗ ಮಾಡಿರುವ ಬಗ್ಗೆ ಸಂಬಂಧಪಟ್ಟ ಶಾಲೆಯ ಮುಖ್ಯೋಪಾಧ್ಯಾಯರ ಸಹಿ ಹಾಗೂ ಮೊಹರಿನೊಂದಿಗೆ ಪ್ರಮಾಣ ಪತ್ರವನ್ನು ಪಡೆದಿಟ್ಟುಕೊಂಡಿರತಕ್ಕದ್ದು. ಮೂಲ ದಾಖಲಾತಿ ಪರಿಶೀಲನಾ ಸಮಯದಲ್ಲಿ ತಪ್ಪದೇ ಹಾಜರುಪಡಿಸತಕ್ಕದ್ದು. ತಪ್ಪಿದಲ್ಲಿ, ಅಂತಹ ಅಭ್ಯರ್ಥಿಗಳ ಮೀಸಲಾತಿಯನ್ನು ರದ್ದುಪಡಿಸಲಾಗುವುದು (ಈ ಪ್ರಮಾಣ ಪತ್ರದ ನಮೂನೆಯನ್ನು ಈ ಸೂಚನೆಗಳಿಗೆ ಅನುಬಂಧಿಸಲಾಗಿದೆ) **(ಅನುಬಂಧ-5)**.

X **ಅಂಗವಿಕಲ ಅಭ್ಯರ್ಥಿ**:- ಸರ್ಕಾರಿ ಆದೇಶ ಸಂಖ್ಯೆ:ಡಿಪಿಎಆರ್:50:ಎಸ್ಆರ್ಆರ್:2000, ದಿನಾಂಕ:03-09-2005 ರಲ್ಲಿ ರಾಜ್ಯ ಸಿವಿಲ್ ಸೇವೆಗಳ ಸಮೂಹ- 'ಎ' ಮತ್ತು 'ಬಿ' ಗುಂಪಿನ ಹುದ್ದೆಗಳಿಗೆ ಶೇಕಡ 3 ರಷ್ಟು (ಸರ್ಕಾರದ ಅಧಿಸೂಚನೆ ಸಂಖ್ಯೆ:ಡಿಪಿಎಆರ್:21:ಎಸ್ಆರ್ಆರ್: 2008, ದಿನಾಂಕ:03-08-2009 ರ ಅನುಸೂಚಿಯಡಿ ಸೇರ್ಪಡೆ ಮಾಡಲಾಗಿರುವ ಇಲಾಖೆಗಳು) ಮತ್ತು ಸಮೂಹ 'ಸಿ' ಗುಂಪಿನ ಹುದ್ದೆಗಳಿಗೆ ಶೇಕಡ 5 ರಷ್ಟು (ಸರ್ಕಾರದ ಅಧಿಸೂಚನೆ ಸಂಖ್ಯೆ:ಡಿಪಿಎಆರ್ 52:ಎಸ್ಆರ್ಆರ್:99, ದಿನಾಂಕ:29-11-2002 ರ ಅನುಸೂಚಿಯಡಿ ಸೇರ್ಪಡೆಗೊಳಿಸಲಾಗಿರುವ ಇಲಾಖೆಗಳು) ಹುದ್ದೆಗಳನ್ನು ಅಂಗವಿಕಲರಿಗೆ ಮೀಸಲಾತಿ ಕಲ್ಪಿಸಿದ್ದು, ಇದರನ್ವಯ ಶೇಕಡ 40 ಕ್ಕಿಂತ ಕಡಿಮೆ ಇಲ್ಲದಂತಹ ಅಂಗವಿಕಲತೆಯುಳ್ಳ ಅಭ್ಯರ್ಥಿಗಳು ಮಾತ್ರ ಈ ಮೀಸಲಾತಿಯನ್ನು ಕೋರಲು ಅರ್ಹರು. ಸರ್ಕಾರದ ಅಧಿಕೃತ ಜ್ಞಾಪನ ಸಂಖ್ಯೆ:ಸಿಆಸುಇ:115:ಸೆನೆನಿ:2005, ದಿನಾಂಕ:19-11-2005 ರಲ್ಲಿ ನಿಗದಿಪಡಿಸಿರುವ ನಮೂನೆಯಲ್ಲಿ ಅಂಗವಿಕಲತೆ ಬಗ್ಗೆ **ಜಿಲ್ಲಾ ಮಟ್ಟದ ವೈದ್ಯಕೀಯ ಮಂಡಳಿಯಿಂದ ಪ್ರಮಾಣ ಪತ್ರವನ್ನು ಪಡೆದಿಟ್ಟುಕೊಂಡಿರತಕ್ಕದ್ದು**. ಮೂಲ ದಾಖಲಾತಿ ಪರಿಶೀಲನೆಗೆ ತಪ್ಪದೇ ಹಾಜರುಪಡಿಸಕ್ಕದ್ದು. ತಪ್ಪಿದಲ್ಲಿ, ಅಂತಹ ಅಭ್ಯರ್ಥಿಗಳ ಮೀಸಲಾತಿಯನ್ನು ರದ್ದುಪಡಿಸಲಾಗುವುದು. ಇತರೆ ಯಾವುದೇ ನಮೂನೆಯಲ್ಲಿ ಅಂಗವಿಕಲತೆಯ ಬಗ್ಗೆ ಪಡೆಯಲಾಗಿರುವ ಪ್ರಮಾಣ ಪತ್ರಗಳನ್ನು / ಗುರುತಿನ ಚೀಟಿಯ ಪ್ರತಿಗಳನ್ನು ಪರಿಗಣಿಸಲು ಬರುವುದಿಲ್ಲ. ಈ ಪ್ರಮಾಣ ಪತ್ರದ ನಮೂನೆಯನ್ನು ಈ ಸೂಚನೆಗಳಿಗೆ ಅನುಬಂಧಿಸಲಾಗಿದೆ. ಮೀಸಲಾತಿ ಪ್ರಮಾಣ ಪತ್ರ ಜಾರಿ ಮಾಡಿದ ದಿನಾಂಕವನ್ನು ತಪ್ಪದೇ ಅರ್ಜಿಯಲ್ಲಿ ಸಂಬಂಧಪಟ್ಟ ಅಂಕಣದಲ್ಲಿ ನಮೂದಿಸತಕ್ಕದ್ದು. **(ಅನುಬಂಧ-6)**.

**ವಿಶೇಷ ಸೂಚನೆ:- ಅಂಗವಿಕಲ ಅಭ್ಯರ್ಥಿಗಳಿಗೆ ಸರ್ಕಾರಿ ಆದೇಶ ಸಂಖ್ಯೆ: DPAR:179:SRR:2012, ದಿನಾಂಕ:09-10-2012 ರಂತೆ – (1) ಒಂದು ಕಾಲಿನ ಅಂಗವಿಕಲರು**

**(2) ಶ್ರವಣ ದೋಷ ಉಳ್ಳವರು ಮಾತ್ರ ಅರ್ಜಿಯನ್ನು ಸಲ್ಲಿಸಲು ಅರ್ಹರಾಗಿರುತ್ತಾರೆ.**

XI **ಯೋಜನಾ ನಿರಾಶ್ರಿತ ಅಭ್ಯರ್ಥಿ**:-ಸರ್ಕಾರಿ ಆದೇಶ ಸಂಖ್ಯೆ:ಡಿಪಿಎಆರ್-23:ಎಸ್.ಆರ್.ಆರ್:99 ದಿನಾಂಕ:23-11-2000 ರಂತೆ ಯೋಜನೆಗಳಿಂದ ನಿರಾಶ್ರಿತರಾದ ಕುಟುಂಬದ ಅಭ್ಯರ್ಥಿಗಳು ಸರ್ಕಾರಿ ಸುತ್ತೋಲೆ ಸಂಖ್ಯೆ:ಸಿಆಸುಇ-44:ಸೇನೇನಿ, ದಿನಾಂಕ:27-07-2001 ರಲ್ಲಿ ನಿಗದಿ ಪಡಿಸಲಾದ ನಮೂನೆಯಲ್ಲಿ ಪ್ರಮಾಣ ಪತ್ರವನ್ನು ಸಂಬಂಧಿಸಿದ ತಹಶೀಲ್ದಾರ್‌ರವರಿಂದ ಆಸ್ತಿಯನ್ನು ಸ್ವಾಧೀನಪಡಿಸಿಕೊಂಡಿರುವ ದಿನಾಂಕವನ್ನು ಸ್ಪಷ್ಟವಾಗಿ ನಮೂದಿಸಿರುವ ಪ್ರಮಾಣ

ಪತ್ರವನ್ನು ಮತ್ತು ಅವಾರ್ಡ್ ಲೆಟರ್ (Award Letter) ನ್ನು ಅರ್ಜಿ ಸಲ್ಲಿಸಲು ನಿಗದಿಪಡಿಸಿದ ಕೊನೆಯ ದಿನಾಂಕದೊಳಗೆ ಪಡೆದಿಟ್ಟುಕೊಂಡಿರತಕ್ಕದ್ದು **(ಅನುಬಂಧ-7)**.

XII **<u>ವ್ಯಾಸಂಗ ಪ್ರಮಾಣ ಪತ್ರದ ಬಗ್ಗೆ</u>:**-ಕರ್ನಾಟಕ ರಾಜ್ಯದಲ್ಲಿ ಹತ್ತು ವರ್ಷಗಳಿಗೆ ಕಡಿಮೆ ಇಲ್ಲದಂತೆ ಅಂದರೆ ಒಂದನೇ ತರಗತಿಯಿಂದ 10ನೇ ತರಗತಿಯವರೆಗೆ ವ್ಯಾಸಂಗ ಮಾಡದಿರುವ ಯಾವುದೇ ಅಭ್ಯರ್ಥಿಯು ಈ ನಿಯಮಗಳ ಅಡಿಯಲ್ಲಿ ಆಯ್ಕೆಗೆ ಅರ್ಹರಾಗುವುದಿಲ್ಲ. ಅಭ್ಯರ್ಥಿಗಳು 10 ವರ್ಷ ಕರ್ನಾಟಕ ರಾಜ್ಯದಲ್ಲಿ ವ್ಯಾಸಂಗ ಮಾಡಿರುವ ಬಗ್ಗೆ ಸಂಬಂಧಪಟ್ಟ ಶಾಲೆಗಳ ಮುಖ್ಯೋಪಾಧ್ಯಾಯರಿಂದ ಪ್ರಮಾಣ ಪತ್ರಗಳನ್ನು ಪಡೆದು ಅರ್ಜಿಗಳನ್ನು ಸಲ್ಲಿಸಲು ನಿಗದಿಪಡಿಸಲಾಗಿರುವ ಕೊನೆಯ ದಿನಾಂಕದೊಳಗೆ ಪಡೆದಿಟ್ಟುಕೊಂಡಿರತಕ್ಕದ್ದು.

XIII **<u>ಸರ್ಕಾರಿ ಸೇವೆಯಲ್ಲಿರುವ ನೌಕರರಿಗೆ</u>:**-ಅಭ್ಯರ್ಥಿಯು ಕರ್ನಾಟಕ ರಾಜ್ಯ ಸರ್ಕಾರದಲ್ಲಿ ಅಥವಾ ಸ್ಥಳೀಯ ಪ್ರಾಧಿಕಾರದಲ್ಲಿ ಅಥವಾ ರಾಜ್ಯ ಅಧಿನಿಯಮ ಅಥವಾ ಕೇಂದ್ರ ಅಧಿನಿಯಮದ ಮೂಲಕ ಸ್ಥಾಪನೆಯಾದ ಅಥವಾ ರಾಜ್ಯ ಅಧಿನಿಯಮದ ಅಥವಾ ಕೇಂದ್ರ ಅಧಿನಿಯಮದ ಮೂಲಕ ಸ್ಥಾಪನೆಗೊಂಡು ಕರ್ನಾಟಕ ರಾಜ್ಯ ಸರ್ಕಾರದ ಸ್ವಾಮ್ಯ ಅಥವಾ ನಿಯಂತ್ರಣದಲ್ಲಿರುವ ನಿಗಮದಲ್ಲಿ ಹುದ್ದೆ ಹೊಂದಿರುವ ನೌಕರರು ಪ್ರಮಾಣ ಪತ್ರವನ್ನು ಸಂಬಂಧಪಟ್ಟ ಇಲಾಖಾ ಮುಖ್ಯಸ್ಥರಿಂದ ಪಡೆದಿಟ್ಟುಕೊಂಡಿರತಕ್ಕದ್ದು. **(ಅನುಬಂಧ-8)**.

XIV **<u>ವಿಶೇಷ ಸೂಚನೆಗಳು</u>:**-ಅಭ್ಯರ್ಥಿಯ ಇತ್ತೀಚಿನ ಪಾಸ್‌ಪೋರ್ಟ್ ಅಳತೆಯ ಭಾವಚಿತ್ರವನ್ನು ಒಂದು ಹಾಳೆಯ ಮೇಲಿಟ್ಟು ಅದರ ಕೆಳಗೆ ಕಪ್ಪು ಶಾಹಿಯ ಸ್ಕೆಚ್ / ಮಾರ್ಕರ್ ಪೆನ್ನಲ್ಲಿ ಸಹಿ ಮಾಡಿ ಇದನ್ನು ಸ್ಕ್ಯಾನ್ ಮಾಡಿ ಅರ್ಜಿಗೆ **UPLOAD** ಮಾಡಬೇಕು. ಈ ಕೆಳಕಂಡ ಪ್ರಮಾಣ ಪತ್ರಗಳನ್ನು ನಿಗದಿತ ನಮೂನೆಯಲ್ಲಿ **ON-LINE** ಮೂಲಕ ಅರ್ಜಿ ಭರ್ತಿ ಮಾಡಲು ನಿಗದಿಪಡಿಸಿದ ಕೊನೆಯ ದಿನಾಂಕದೊಳಗೆ ಸಂಬಂಧಪಟ್ಟ ಪ್ರಾಧಿಕಾರಿಗಳಿಂದ ಪಡೆದಿಟ್ಟುಕೊಂಡಿರತಕ್ಕದ್ದು ಹಾಗೂ **ಕೋರಿರುವ ಮೀಸಲಾತಿ ಪ್ರಮಾಣ ಪತ್ರಗಳು ಮತ್ತು ಇತರೆ ಪ್ರಮಾಣ ಪತ್ರಗಳನ್ನು ಅರ್ಜಿ ಭರ್ತಿ ಮಾಡಲು ನಿಗದಿಪಡಿಸಿರುವ ಕೊನೆಯ ದಿನಾಂಕದೊಳಗೆ ಪಡೆದಿಟ್ಟುಕೊಂಡಿರತಕ್ಕದ್ದು ಹಾಗೂ ಅದೇ ಮೀಸಲಾತಿ ಪ್ರಮಾಣ ಪತ್ರದ ಮೂಲ ಪ್ರತಿಯನ್ನು ಮೂಲ ದಾಖಲಾತಿ ಪರಿಶೀಲನೆಗೆ ಹಾಜರುಪಡಿಸಬೇಕು. ಇತರೆ ನಮೂನೆಗಳಲ್ಲಿ ಅಥವಾ ಅರ್ಜಿ ಭರ್ತಿ ಮಾಡಲು ನಿಗದಿಪಡಿಸಿದ ಕೊನೆಯ ದಿನಾಂಕದ ನಂತರ ಪಡೆದ ಯಾವುದೇ ಪ್ರಮಾಣ ಪತ್ರಗಳನ್ನು ಪರಿಗಣಿಸಲಾಗುವುದಿಲ್ಲ. ತಪ್ಪಿದಲ್ಲಿ, ಅವರ ಮೀಸಲಾತಿಯನ್ನು / ಅಭ್ಯರ್ಥಿತ್ವವನ್ನು ಅನರ್ಹಗೊಳಿಸಲಾಗುವುದು.**

1) ಹುದ್ದೆಗೆ ನಿಗದಿಪಡಿಸಿದ ಶುಲ್ಕ (ಅರ್ಜಿಯನ್ನು ಭರ್ತಿ ಮಾಡಿದ ನಂತರ ಪಾವತಿಸತಕ್ಕದ್ದು) ಪಾವತಿ ರಸೀತಿ(ಚಲನ್ ಪ್ರತಿ).

2) ಜನ್ಮ ದಿನಾಂಕವನ್ನು ನಮೂದಿಸಿರುವ ಎಸ್.ಎಸ್.ಎಲ್.ಸಿ ಅಥವಾ ವರ್ಗಾವಣೆ ಪ್ರಮಾಣ ಪತ್ರ / ಜನನ ದಿನಾಂಕವನ್ನು ತೋರಿಸುವ ಸಂಚಿತ ದಾಖಲೆಯ ಉಧೃತ ಭಾಗವನ್ನು ಸಲ್ಲಿಸತಕ್ಕದ್ದು ಹಾಗೂ ಅರ್ಜಿಗಳನ್ನು ಸಲ್ಲಿಸಲು ನಿಗದಿಪಡಿಸಿರುವ ಕೊನೆಯ ದಿನಾಂಕಕ್ಕೆ ವಯೋಮಿತಿ ಮೀರಿರಬಾರದು.

3) ನಿರಾಕ್ಷೇಪಣಾ ಪತ್ರ **(No Objection Certificate)** (ಸರ್ಕಾರಿ ಸೇವೆಯಲ್ಲಿರುವ ಅಭ್ಯರ್ಥಿಗಳಿಗೆ).

4) ಸೈನಿಕ ಸೇವೆಯಿಂದ ಬಿಡುಗಡೆಯಾದ / ಮುಕ್ತಿ ಹೊಂದಿದ ಬಗೆಗಿನ ಪ್ರಮಾಣ ಪತ್ರ / ಮಾಜಿ

ಸೈನಿಕ ಅವಲಂಬಿತರಾಗಿದ್ದಲ್ಲಿ, ಮಾಜಿ ಸೈನಿಕರು ಬಿಡುಗಡೆ ಹೊಂದಿರುವ ಕಾರಣಗಳ ಪ್ರಮಾಣ ಪತ್ರ (ಮಾಜಿ ಸೈನಿಕರು ಸೇವೆಯಲ್ಲಿರುವಾಗ ಮೃತಪಟ್ಟಿದ್ದಲ್ಲಿ, ಅಥವಾ ಖಾಯಂ ಆಗಿ ಗಾಯಗೊಂಡಿರುವ ಪ್ರಮಾಣ ಪತ್ರ) (ಮಾಜಿ ಸೈನಿಕ ಮೀಸಲಾತಿ ಕೋರಿದ್ದಲ್ಲಿ).

5) ಪರಿಶಿಷ್ಟ ಜಾತಿ, ಪರಿಶಿಷ್ಟ ಪಂಗಡ, ಪ್ರವರ್ಗ–1, ಪ್ರವರ್ಗ–2ಎ, ಪ್ರವರ್ಗ–2ಬಿ, ಪ್ರವರ್ಗ–3ಎ, ಮತ್ತು ಪ್ರವರ್ಗ–3ಬಿ ಮೀಸಲಾತಿ ಪ್ರಮಾಣ ಪತ್ರಗಳು ಪ್ರಸ್ತುತ ಚಾಲ್ತಿಯಲ್ಲಿರುವ ನಮೂನೆಗಳಲ್ಲಿ (ಮೀಸಲಾತಿ ಕೋರಿದ್ದಲ್ಲಿ).

6) ಗ್ರಾಮೀಣ ಮೀಸಲಾತಿ ಪ್ರಮಾಣ ಪತ್ರ ನಮೂನೆ–1 ಮತ್ತು 2 ರಲ್ಲಿ (ಮೀಸಲಾತಿ ಕೋರಿದ್ದಲ್ಲಿ).

7) ಕನ್ನಡ ಮಾಧ್ಯಮದಲ್ಲಿ ವ್ಯಾಸಂಗ ಮಾಡಿದ ಪ್ರಮಾಣ ಪತ್ರ (ಮೀಸಲಾತಿ ಕೋರಿದ್ದಲ್ಲಿ).

8) ಅಂಗವಿಕಲ ಮೀಸಲಾತಿ ಪ್ರಮಾಣ ಪತ್ರ(ವಯೋಮಿತಿ ಸಡಿಲಿಕೆಗಾಗಿ ಮೀಸಲಾತಿ ಕೋರಿದ್ದಲ್ಲಿ).

9) ವಿಧವೆಯಾಗಿದ್ದಲ್ಲಿ, ತಹಶೀಲ್ದಾರರಿಂದ ಮರು ಮದುವೆಯಾಗದಿರುವ ಬಗ್ಗೆ ಪ್ರಮಾಣ ಪತ್ರ (ವಯೋಮಿತಿ ಸಡಿಲಿಕೆಗಾಗಿ).

**<u>ಸೂಚನೆಗಳು:–</u>**

1. **ON-LINE** ಮೂಲಕ ಅರ್ಜಿ ಸಲ್ಲಿಸುವಾಗ ಎಲ್ಲಾ ಮಾಹಿತಿಗಳನ್ನು ಸರಿಯಾಗಿ ಭರ್ತಿ ಮಾಡಿರುವ ಬಗ್ಗೆ ಖಚಿತಪಡಿಸಿಕೊಂಡು ನಂತರ ಅದರ ಒಂದು ಪ್ರತಿಯನ್ನು Download ಮಾಡಿಕೊಂಡು ಭದ್ರವಾಗಿ ಇಟ್ಟುಕೊಳ್ಳತಕ್ಕದ್ದು ಹಾಗೂ ಮೂಲ ದಾಖಲಾತಿ ಪರಿಶೀಲನಾ ಸಮಯದಲ್ಲಿ ಹಾಜರುಪಡಿಸತಕ್ಕದ್ದು.

2. ಈಗಾಗಲೇ ಸೇವೆಯಲ್ಲಿರುವ / ಸೇವೆ ಸಲ್ಲಿಸಿದ ಅಭ್ಯರ್ಥಿಗಳು ಅವರುಗಳ ನೇಮಕಾತಿ ಪ್ರಾಧಿಕಾರಿಗಳಿಂದ ಅರ್ಜಿ ಸಲ್ಲಿಸಲು ನಿಗಧಿಪಡಿಸಿದ ಕೊನೆಯ ದಿನಾಂಕದೊಳಗೆ ಅನುಮತಿ ಪತ್ರವನ್ನು ಪಡೆದಿಟ್ಟುಕೊಂಡಿರತಕ್ಕದ್ದು ಹಾಗೂ ವಿವರಗಳನ್ನು ಅರ್ಜಿಯಲ್ಲಿ ನಮೂದಿಸತಕ್ಕದ್ದು.

3. ಅರ್ಜಿಗಳನ್ನು ಭರ್ತಿ ಮಾಡಲು ಕೊನೆಯ ದಿನಾಂಕವು ಸಾರ್ವತ್ರಿಕ ರಜಾ ದಿನವಾಗಿ ಘೋಷಿಸಲ್ಪಟ್ಟರೆ, ಆ ದಿನಾಂಕದ ಮಾರನೆಯ ಕೆಲಸದ ದಿನವು ಅರ್ಜಿಗಳನ್ನು ಭರ್ತಿ ಮಾಡಲು ಕೊನೆಯ ದಿನಾಂಕವಾಗುವುದು.

**<u>ಹುದ್ದೆಯ ಕರ್ತವ್ಯ ಮತ್ತು ಜವಾಬ್ದಾರಿಯ ಕಾರ್ಯನಿರ್ವಹಣೆ:</u>**– ಪಶುಪಾಲನಾ ಮತ್ತು ಪಶುವೈದ್ಯ ಸೇವಾ ಇಲಾಖೆಯಲ್ಲಿರುವ ಜಿಲ್ಲಾ ಪಶು ಆಸ್ಪತ್ರೆಗಳು, ತಾಲ್ಲೂಕು ಪಶು ಆಸ್ಪತ್ರೆ, ಪಶು ಚಿಕಿತ್ಸಾಲಯಗಳು, ಪ್ರಾಥಮಿಕ ಪಶುಚಿಕಿತ್ಸಾಲಯಗಳು ಮತ್ತು ಜಾನುವಾರು ಕ್ಷೇತ್ರಗಳಲ್ಲಿ ಸಹಾಯಕ ನಿರ್ದೇಶಕರು / ಪಶುವೈದ್ಯಾಧಿಕಾರಿಗಳು / ಪಶುವೈದ್ಯಕೀಯ ಮೇಲ್ವಿಚಾರಕರು / ಪಶುವೈದ್ಯಕೀಯ ಪರೀಕ್ಷಕರ ಅಧೀನದಲ್ಲಿ ಹಾಗೂ ಅವರ ಮಾರ್ಗದರ್ಶನ ದಲ್ಲಿ ಕಾರ್ಯನಿರ್ವಹಿಸುವುದು. ಅವರ ಕರ್ತವ್ಯ ಮತ್ತು

ಹೊಣೆಗಾರಿಕೆಗಳು ಈ ಕೆಳಕಂಡಂತಿವೆ:

1. ಔಷಧಿ ಅಪ್ಪಣೆ ಚೀಟಿಯ ಪ್ರಕಾರ ಅತ್ಯಂತ ನಿಖರ ಪ್ರಮಾಣದಲ್ಲಿ ಔಷಧಗಳ, ವಿಶೇಷವಾಗಿ ವಿಷ ವಸ್ತುಗಳನ್ನೊಳಗೊಂಡಿರುವ ಔಷಧಗಳ ವಿತರಣೆ ಕಾರ್ಯವನ್ನು ಅತಿ ಎಚ್ಚರ ವಹಿಸಿ ನಿರ್ವಹಣೆ.

2. ಔಷಧಿ ವಿತರಣಾ ಕೊಠಡಿಯಲ್ಲಿರುವ ಔಷಧಿ ಮಿಶ್ರಣ ಶೀಷೆಗಳು, ಉಪಕರಣಗಳು, ಔಷಧ ಪ್ರಮಾಣ ಮಾನಗಳು, ಮತ್ತಿತರ ವಸ್ತುಗಳನ್ನು ವ್ಯವಸ್ಥಿತವಾಗಿ ಹಾಗೂ ಸ್ವಚ್ಛವಾಗಿರುವ ಕಾರ್ಯ ನಿರ್ವಹಣೆ.

3. ಔಷಧಿಗಳ ಪ್ರತಿ ದಿನದ ವಿತರಣಾ ವಿವರಗಳ ಹಾಗೂ ಮೇಲಧಿಕಾರಿಗಳ ಚಿಕ್ಕ ಸಹಿಯನ್ನೊಳಗೊಂಡ ವಹಿಯ ಹಾಗೂ ಔಷಧಿ ದಾಸ್ತಾನು ನಿರ್ವಹಣೆ.

4. ವಿವಿಧ ಔಷಧಿಗಳ ಅವಧಿ ತೀರಿಕೆಯ ದಿನಾಂಕಗಳನ್ನು ಗಮನಿಸಿಕೊಂಡಿದ್ದು, ಅವಧಿ ತೀರುವ ಮುನ್ನ ಮೇಲಧಿಕಾರಿಗಳಿಗೆ ವರದಿ ಮಾಡುವ ಕಾರ್ಯ ನಿರ್ವಹಣೆ.

5. ಗಾಯಗಳ ಹಾಗೂ ಸಾಮಾನ್ಯ ರೋಗ ಚಿಕಿತ್ಸೆ ಕಾರ್ಯ ನಿರ್ವಹಣೆ.

6. ಆವರ್ಣಿತ ಹೋರಿ, ಟಗರು, ಹೋತಗಳನ್ನು ಕಸಿ ಮಾಡುವ ಕಾರ್ಯ ನಿರ್ವಹಣೆ.

7. ಒಳ ಪರೋಪ ಜೀವಿಗಳ ವಿರುದ್ಧ ಸಾಮೂಹಿಕ ಔಷಧಿ ಕುಡಿಸುವಿಕೆ ಹಾಗೂ ಹೊರ ಪರೋಪ ಜೀವಿಗಳ ವಿರುದ್ಧ ಔಷಧಿ ಸಿಂಪಡಿಸುವ ಕಾರ್ಯ ನಿರ್ವಹಣೆ.

8. ಅವಶ್ಯಕ ವಸ್ತುಗಳ ಹಾಗೂ ಉಪಕರಣಗಳ ಶುದ್ಧೀಕರಣ ಹಾಗೂ ಸ್ಟೆರ್‌ಲೈಸೇಷನ್ ಕಾರ್ಯ ನಿರ್ವಹಣೆ.

9. ಚಿಕಿತ್ಸಾಲಯದ ಉಪಕರಣಗಳು / ಸಲಕರಣೆಗಳು ಸುಸ್ಥಿತಿಯಲ್ಲಿರುವಂತೆ ನೋಡಿಕೊಳ್ಳುವ ಕಾರ್ಯ ನಿರ್ವಹಣೆ.

10. ಚಿಕಿತ್ಸಾಲಯದ ವರದಿಗಳನ್ನು ತಯಾರಿಸಲು ಮೇಲಧಿಕಾರಿಗಳಿಗೆ ಸಹಾಯಕರಾಗಿ ಕಾರ್ಯ ನಿರ್ವಹಣೆ.

11. ಅವಶ್ಯಕವಿದ್ದಲ್ಲಿ, ಕೃತಕ ಗರ್ಭಧಾರಣೆ, ಗರ್ಭಪರೀಕ್ಷೆ ಹಾಗೂ ಪುನರ್ ಪರಿಶೀಲನಾ ಕಾರ್ಯ ನಿರ್ವಹಣೆ.

12. ಅವಶ್ಯಕವಿದ್ದಲ್ಲಿ, ಸಾಂಕ್ರಾಮಿಕ ರೋಗ ಪ್ರತಿಬಂಧಕ ಲಸಿಕೆಗಳನ್ನು ಹಾಕುವ ಕಾರ್ಯ ನಿರ್ವಹಣೆ.

13. ಅವಶ್ಯಕ ಸಂದರ್ಭಗಳಲ್ಲಿ ಚಿಕಿತ್ಸಾಲಯದ ಕಾರ್ಯ ನಿರ್ವಹಣೆ.

14. ಮೇಲಧಿಕಾರಿಗಳಿಂದ ವಹಿಸಲ್ಪಟ್ಟ ಮತ್ತಾವುದೇ ಕಾರ್ಯಗಳ ನಿರ್ವಹಣೆ.

16. **<u>ದುರ್ನಡತೆ:</u>-** ಒಬ್ಬ ಅಭ್ಯರ್ಥಿಯು ನಕಲಿ ವ್ಯಕ್ತಿಯಾಗಿರುವನೆಂದು ಅಥವಾ ಖೋಟಾ ದಸ್ತಾವೇಜು ಅಥವಾ ತಿದ್ದಲಾದ ದಸ್ತಾವೇಜುಗಳನ್ನು ಸಲ್ಲಿಸಿರುವನೆಂದು ಅಥವಾ ತಪ್ಪು ಅಥವಾ ಸುಳ್ಳು ಹೇಳಿಕೆ ನೀಡಿರುವನೆಂದು ಅಥವಾ ವಾಸ್ತವಿಕ ಮಾಹಿತಿಯನ್ನು ಮರೆಮಾಚಿರುವನೆಂದು ಅಥವಾ ನೇಮಕಾತಿ ಉದ್ದೇಶಗಳಿಗಾಗಿ ನಡೆಸಲಾಗುವ ವೈದ್ಯಕೀಯ ಪರೀಕ್ಷೆಯಲ್ಲಿ / ಮೂಲ ದಾಖಲಾತಿ ಪರಿಶೀಲನೆ ಸಮಯದಲ್ಲಿ ಅನುಚಿತ ಮಾರ್ಗವನ್ನು ಅನುಸರಿಸುತ್ತಿರುವನೆಂದು ಅಥವಾ ಅನುಸರಿಸಲು ಪ್ರಯತ್ನಿಸಿರುವನೆಂದು ಅಥವಾ ಅವರ ನೇಮಕಾತಿಯ ಸಂಬಂಧದಲ್ಲಿ ಯಾವುದೇ ಇತರೆ ಅಕ್ರಮ ಮತ್ತು ಅನುಚಿತ ಮಾರ್ಗವನ್ನು ಅವಲಂಬಿಸಿರುವನೆಂದು ಕಂಡುಬಂದಲ್ಲಿ, ಅವನು / ಅವಳು ಸ್ವತ: ಕ್ರಿಮಿನಲ್ ವ್ಯವಹರಣೆಗಳಿಗೆ ಮತ್ತು ಶಿಸ್ತು ಕ್ರಮಕ್ಕೆ ಒಳಪಡುವುದಲ್ಲದೇ, ಹುದ್ದೆಯ ಆಯ್ಕೆಯಿಂದ ಅಭ್ಯರ್ಥಿತ್ವವನ್ನು ರದ್ದುಪಡಿಸಲಾಗುವುದು.

**ಸದಸ್ಯ ಕಾರ್ಯದರ್ಶಿ**
**ವಿಶೇಷ ನೇಮಕಾತಿ ಸಮಿತಿ ಹಾಗೂ**
**ಜಂಟಿ ನಿರ್ದೇಶಕರು(ಆಡಳಿತ)**
**ಪಶುಪಾಲನಾ ಮತ್ತು ಪಶುವೈದ್ಯ ಸೇವಾ ಇಲಾಖೆ.**

**ಅಧ್ಯಕ್ಷರು**
**ವಿಶೇಷ ನೇಮಕಾತಿ ಸಮಿತಿ ಹಾಗೂ**
**ಆಯುಕ್ತರು**
**ಪಶುಪಾಲನಾ ಮತ್ತು ಪಶುವೈದ್ಯ ಸೇವಾ ಇಲಾಖೆ**

## CERTIFICATE FOR THE PERSONS WITH DISABILITIES

This is to certify that Sri / Smt / Kum ……………………………………………………………son / wife / Daughter of Shri…………………………………………Age………………………………………old, male/ female, Registration No……………………………..is a case of………………………………………… He/she is physically disabled / visual disabled / speech / & hearing disabled and has …………………………………………% ……………………. percent) permanent (Physical impairment / Visual impairment speech & hearing impairment) in relation to his / her …………………………………………..

Note:

1. This condition is progressive / non progressive likely to improve / not likely to improve.
2. Re-assessment is not recommended / is recommended after a period of ……………………. Months / years.

" Strike out which is not applicable

| | | | |
|---|---|---|---|
| Recent Photograph showing the disability affixed here | DOCTOR<br>(Seal) | DOCTOR<br>(Seal) | DOCTOR<br>(Seal) |

Countersigned by the
Medical Superintendent CMO Head of
Hospital (with seal)

Signature / Thumb impression
Of the disabled person.

Note: Certificate should be signed by all the three members of the Medical Board and Countersigned by the Medical Superintendent / CMO / Head of Hospital with seal.

(ಪ.ಜಾ / ಪ.ಪಂ. ಕ್ಕೆ ಸೇರಿದ ಅಭ್ಯರ್ಥಿಗಳಿಗೆ ಮಾತ್ರ)
ನಮೂನೆ – ಡಿ

**(ನಿಯಮ 3ಎ (2) (3) ನ್ನು ನೋಡಿ)**

**ಅನುಸೂಚಿತ ಜಾತಿ ಮತ್ತು ಅನುಸೂಚಿತ ಬುಡಕಟ್ಟುಗಳಿಗೆ ಸೇರಿದ ಅಭ್ಯರ್ಥಿಗಳಿಗೆ ನೀಡುವ ಪ್ರಮಾಣ ಪತ್ರಗಳ ನಮೂನೆ.**

**ಪ್ರಮಾಣ ಪತ್ರ**

________________ರಾಜ್ಯದ / ಕೇಂದ್ರಾಡಳಿತ ಪ್ರದೇಶದ * ________________ಜಿಲ್ಲೆಯ / ವಿಭಾಗದ ________________ಗ್ರಾಮ / ಪಟ್ಟಣ * ನಿವಾಸಿಯಾದ ಶ್ರೀ / ಶ್ರೀಮತಿ ________________ ಇವರು ಅನುಸೂಚಿತ ಜಾತಿ / ಅನುಸೂಚಿತ ಬುಡಕಟ್ಟು * ಎಂದು ಮಾನ್ಯ ಮಾಡಲಾಗಿರುವ ಜಾತಿ / ಬುಡಕಟ್ಟಿಗೆ * ಸೇರಿರುತ್ತಾರೆಂದು ಪ್ರಮಾಣೀಕರಿಸಲಾಗಿದೆ.

- ಸಂವಿಧಾನ (ಅನುಸೂಚಿತ ಜಾತಿಗಳು) ಆದೇಶ, 1950
- ಸಂವಿಧಾನ (ಅನುಸೂಚಿತ ಬುಡಕಟ್ಟುಗಳು) ಆದೇಶ, 1950
- ಸಂವಿಧಾನ (ಅನುಸೂಚಿತ ಜಾತಿ) (ಕೇಂದ್ರಾಡಳಿತ ಪ್ರದೇಶಗಳು) ಆದೇಶ, 1950
- ಸಂವಿಧಾನ (ಅನುಸೂಚಿತ ಬುಡಕಟ್ಟುಗಳು) (ಕೇಂದ್ರಾಡಳಿತ ಪ್ರದೇಶಗಳು) ಆದೇಶ, 1950

(ಅನುಸೂಚಿತ ಜಾತಿ ಮತ್ತು ಅನುಸೂಚಿತ ಬುಡಕಟ್ಟುಗಳ ಪಟ್ಟಿ (ಮಾರ್ಪಾಡು) ಆದೇಶ 1956, ಮುಂಬಾಯಿ ರಾಜ್ಯ, ಪುನರ್ ರಚನಾ ಅಧಿನಿಯಮ 1960 ಪಂಜಾಬ್ ರಾಜ್ಯ ಪುನರ್ ರಚನಾ ಅಧಿನಿಯಮ, 1966, ಹಿಮಾಚಲ ಪ್ರದೇಶ ರಾಜ್ಯ ಅಧಿನಿಯಮ 1970 ಮತ್ತು ಈಶಾನ್ಯ ಪ್ರದೇಶಗಳ ( ಪುನರ್ ರಚನಾ ಅಧಿನಿಯಮ, 1971 ರ ಮೂಲಕ ತಿದ್ದುಪಡಿಯಾದಂತೆ).

- ಸಂವಿಧಾನ (ಜಮ್ಮು ಮತ್ತು ಕಾಶ್ಮೀರ) ಅನುಸೂಚಿತ ಜಾತಿಗಳ ಆದೇಶ 1956.
- ಅನುಸೂಚಿತ ಜಾತಿ ಮತ್ತು ಅನುಸೂಚಿತ ಬುಡಕಟ್ಟುಗಳ (ತಿದ್ದುಪಡಿ) ಅಧಿನಿಯಮ, 1976 ರ ಮೂಲಕ ತಿದ್ದುಪಡಿಯಾದಂತೆ ಸಂವಿಧಾನ (ಅಂಡಮಾನ್ ಮತ್ತು ನಿಕೋಬಾರ್ ದ್ವೀಪಗಳ) ಅನುಸೂಚಿತ ಬುಡಕಟ್ಟು ಆದೇಶ 1959.
- ಸಂವಿಧಾನ (ದಾದರ್ ಮತ್ತು ನಗರ ಹವೇಲಿ) ಅನುಸೂಚಿತ ಜಾತಿಗಳ ಆದೇಶ, 1962.
- ಸಂವಿಧಾನ (ಪಾಂಡಿಚೆರಿ) ಅನುಸೂಚಿತ ಜಾತಿಗಳ ಆದೇಶ, 1964.
- ಸಂವಿಧಾನ ಅನುಸೂಚಿತ ಬುಡಕಟ್ಟುಗಳ (ಉತ್ತರ ಪ್ರದೇಶ) ಆದೇಶ 1967.
- ಸಂವಿಧಾನ (ಗೋವಾ, ದಮನ್ ಮತ್ತು ದೀವ್) ಅನುಸೂಚಿತ ಜಾತಿ / ಬುಡಕಟ್ಟುಗಳ ಆದೇಶ 1988.
- ಸಂವಿಧಾನ (ನಾಗಾಲ್ಯಾಂಡ್) ಅನುಸೂಚಿತ ಬುಡಕಟ್ಟುಗಳ ಆದೇಶ

1. ಶ್ರೀ / ಶ್ರೀಮತಿ ಕುಮಾರಿ * ________________ ಮತ್ತು / ಅಥವಾ ಅವನ * ಅವಳ* ಕುಟುಂಬವು ________________ ರಾಜ್ಯ / ಕೇಂದ್ರಾಡಳಿತ ಪ್ರದೇಶದ ________________ ಜಿಲ್ಲಾ / ವಿಭಾಗದ * ________________ ಗ್ರಾಮ / ____________ ಪಟ್ಟಣದ ಸಾಮಾನ್ಯ ನಿವಾಸಿ (ಗಳು).

ಸಹಿ:
ತಹಶೀಲ್ದಾರ್

ಸ್ಥಳ:
ದಿನಾಂಕ:

ಪದನಾಮ
ಕಛೇರಿಯ ಮೊಹರಿನೊಂದಿಗೆ
ರಾಜ್ಯ / ಕೇಂದ್ರಾಡಳಿತ ಪ್ರದೇಶ *

* ಅನ್ವಯವಾಗದಿರುವ ಪದಗಳನ್ನು ದಯವಿಟ್ಟು ಬಿಟ್ಟುಬಿಡಿ / ಹೊಡೆದು ಹಾಕಿ.

ಸೂಚನೆ:– ಇಲ್ಲಿ ಉಪಯೋಗಿಸಿದ " ಸಾಮಾನ್ಯ ನಿವಾಸಿಗಳು" ಎಂಬ ಪದಾವಳಿಯು ಪ್ರಜಾ ಪ್ರಾತಿನಿಧ್ಯ ಅಧಿನಿಯಮ, 1950 ರ 20 ನೇ ಪ್ರಕರಣದಲ್ಲಿರುವ ಅರ್ಥವನ್ನೇ ಹೊಂದಿರುತ್ತದೆ.

ಭಾರತ ಸರ್ಕಾರದ ಪತ್ರ ಸಂಖ್ಯೆ: ಬಿಸಿ 12028/2/78 ಎಸ್ ಸಿಟಿ ಗೃಹ ಮಂತ್ರಾಲಯದ ಅನುಸಾರವಾಗಿ, ಅಂಥ ಪ್ರಮಾಣ ಪತ್ರಗಳನ್ನು ನೀಡಲು ಸಕ್ಷಮವಾಗಿರುವುದಕ್ಕಾಗಿ, ಭಾರತ ಸರ್ಕಾರದ (ಸಿಬ್ಬಂದಿ ಮತ್ತು ಆಡಳಿತ ಸುಧಾರಣಾ ಇಲಾಖೆ) ಪತ್ರ ಸಂಖ್ಯೆ: 13/02/1974 ಇಎಸ್ ಟಿ) ದಿನಾಂಕ: 5ನೇ ಆಗಸ್ಟ್ 1975 ರಲ್ಲಿ ನಮೂದಿಸಿದ ಪ್ರಾಧಿಕಾರಿಯು, ರಾಷ್ಟ್ರಪತಿಗಳು ಸಂಬಂಧಪಟ್ಟ ಆದೇಶದ ಅಧಿಸೂಚನೆಯನ್ನು ಹೊರಡಿಸಿದ ಸಮಯದಲ್ಲಿ ಪ್ರಮಾಣ ಪತ್ರಕ್ಕಾಗಿ ಅರ್ಜಿ ಸಲ್ಲಿಸಿದ ವ್ಯಕ್ತಿಯು, ತನ್ನ ಖಾಯಂ ವಾಸ ಸ್ಥಳವನ್ನು ಹೊಂದಿದ್ದ ಸ್ಥಳಕ್ಕೆ ಸೇರಿದವರೊಬ್ಬರಾಗಿರತಕ್ಕದ್ದು. ಅದೇ ರೀತಿಯಲ್ಲಿ, ಒಂದು ತಾಲ್ಲೂಕಿನ ರೆವಿನ್ಯೂ ಪ್ರಾಧಿಕಾರಿಯು ಇನ್ನೊಂದು ತಾಲ್ಲೂಕಿಗೆ ಸೇರಿದ ವ್ಯಕ್ತಿಗಳಿಗೆ ಸಂಬಂಧಪಟ್ಟ ಪ್ರಮಾಣ ಪತ್ರವನ್ನು ನೀಡಲು ಸಕ್ಷಮ ಪ್ರಾಧಿಕಾರಿಯಾಗುವುದಿಲ್ಲ.

**(ಪ್ರವರ್ಗ – 1 ಕ್ಕೆ ಸೇರಿದ ಅಭ್ಯರ್ಥಿಗಳಿಗೆ ಮಾತ್ರ)**

**ನಮೂನೆ – ಇ**

**(ನಿಯಮ 3ಎ (2) (3) ನ್ನು ನೋಡಿ)**

**ಹಿಂದುಳಿದ ವರ್ಗಗಳಿಗೆ ಸೇರಿದ ಅಭ್ಯರ್ಥಿಗಳಿಗೆ ನೀಡುವ ಪ್ರಮಾಣ ಪತ್ರ**

__________________ಗ್ರಾಮ / ಪಟ್ಟಣ / ನಗರದ ನಿವಾಸಿಯಾದ ಶ್ರೀ. / ಶ್ರೀಮತಿ. ________________ ಇವರ ಮಗ / ಮಗಳು / ಪತಿ / ಪತ್ನಿಯಾದ ಶ್ರೀ / ಶ್ರೀಮತಿ __________________ ಇವರು ಹಿಂದುಳಿದ ವರ್ಗಗಳ (ಪ್ರವರ್ಗ) ____________________ ಜಾತಿಯ _______________ ಉಪಜಾತಿಗೆ ಸೇರಿರುತ್ತಾರೆಂದು ಪ್ರಮಾಣೀಕರಿಸಲಾಗಿದೆ.

ಸ್ಥಳ :
ದಿನಾಂಕ :

ತಹಸೀಲ್ದಾರರು
______________ ತಾಲ್ಲೂಕು
ಕಛೇರಿಯ ಮೊಹರು.

ಪ್ರವರ್ಗ–2ಎ, 2ಬಿ, 3ಎ, 3ಬಿ, ಗೆ ಸೇರಿದ ಅಭ್ಯರ್ಥಿಗಳಿಗೆ ಮಾತ್ರ)

ನಮೂನೆ – ಎಫ್

(ನಿಯಮ 3ಎ (2) (3) ನ್ನು ನೋಡಿ)

**ಪ್ರವರ್ಗ–1 ರ ಹೊರತಾಗಿ, ಹಿಂದುಳಿದ ವರ್ಗಗಳಿಗೆ ಸೇರಿದ ಅಭ್ಯರ್ಥಿಗಳಿಗೆ ನೀಡುವ ಆದಾಯ ಮತ್ತು ಜಾತಿ ಪ್ರಮಾಣ ಪತ್ರ**

______________ರಲ್ಲಿ ವಾಸವಾಗಿರುವ ಶ್ರೀ/ಶ್ರೀಮತಿ__________________ಇವರ ಮಗ/ಮಗಳು/ಪತಿ/ಪತಿಯಾದ, ಶ್ರೀ/ಶ್ರೀಮತಿ/ ಕುಮಾರಿ_______________ ಇವರು ಮತ್ತು ಆತನ / ಅವಳ ತಂದೆ ತಾಯಿ/ ಪೋಷಕರು/ ಪತ್ನಿ/ ಪತಿಯು, ಸರ್ಕಾರಿ ಆದೇಶಗಳ ಸಂಖ್ಯೆ: ಎಸ್ ಡಬ್ಲ್ಯೂಡಿ 225 ಬಿಸಿಎ 2000, ದಿನಾಂಕ 30–03–2002 ರಲ್ಲಿ ನಿರ್ದಿಷ್ಟಪಡಿಸಿದ ಮೇಲುಸ್ತರದ (ಕ್ರಿಮಿ ಲೇಯರ್) ವ್ಯಾಪ್ತಿಯಲ್ಲಿ ಬರುವುದಿಲ್ಲವೆಂದು :

ಅಭ್ಯರ್ಥಿಯಾಗಿ ಅಥವಾ ಆಡಣ / ಆಕೆಯ ತಂದೆ ತಾಯಿ/ ಪೋಷಕರು/ ಪತ್ನಿ/ ಪತಿಯಾಗಲಿ ಸರ್ಕಾರದ ಸೇವೆಯಲ್ಲಿ 1ನೇ ದರ್ಜೆಯ ಅಥವಾ 2ನೇ ದರ್ಜೆಯ ಅಧಿಕಾರಿಯಾಗಿಲ್ಲವೆಂದು :

ಅಥವಾ

ಸಾರ್ವಜನಿಕ ವಲಯ ಉದ್ಯಮದಲ್ಲಿ ತತ್ಸಮಾನದ ಹುದ್ದೆಯನ್ನು ಹೊಂದಿರುವುದಿಲ್ಲ:

ಅಥವಾ

ಖಾಸಗಿ ನಿಯೋಜಕರ ಕೈಕೆಳಗೆ, 2ನೇ ದರ್ಜೆಯ ಅಧಿಕಾರಿಯ ಸಂಬಳಕ್ಕಿಂತ (ವೇತನ ಶ್ರೇಣಿ ರೂ.6000–12000/– ಪ್ರಾರಂಭಿಕ ಹಂತ) ಕಡಿಮೆಯಿಲ್ಲದ ಸಂಬಳವನ್ನು ಪಡೆಯುವ ನೌಕರನಾಗಿಲ್ಲವೆಂದು :

ಅಥವಾ

ಆತನ /ಆಕೆಯ ತಂದೆ ತಾಯಿ/ ಪೋಷಕರು/ ಪತ್ನಿ /ಪತಿಯ ಆದಾಯವೂ ಎರಡು ಲಕ್ಷ ಮೀರಿರುವುದಿಲ್ಲವೆಂದು:

ಅಥವಾ

ಕರ್ನಾಟಕ ಭೂ ಸುಧಾರಣಾ ಅಧಿನಿಯಮ 1961 ರಲ್ಲಿ ನಿಗಧಿಪಡಿಸಿರುವಂತೆ ಆತನ/ ಆಕೆಯ ತಂದೆ ತಾಯಿ/ ಪೋಷಕರು/ ಪತ್ನಿ/ ಪತಿಯು ಮಾರಾಟ ತೆರಿಗೆದಾರನಲ್ಲ ಅಥವಾ ಆತನ/ ಆಕೆಯ ತಂದೆ ತಾಯಿ/ ಪೋಷಕರು/ ಪತ್ನಿ/ ಪತಿಯು ಮಾರಾಟ ತೆರಿಗೆದಾರನಲ್ಲ ಅಥವಾ ಆತನ/ ಆಕೆಯ ತಂದೆ ತಾಯಿ/ ಪೋಷಕ/ ಪತ್ನಿ/ ಪತಿಯು ಅಥವಾ ಇವರಿಬ್ಬರೂ 10 ಯುನಿಟ್‌ಗಿಂತ ಹೆಚ್ಚಿನ ಕೃಷಿ ಭೂಮಿ ಅಥವಾ 25 ಎಕರೆಗಳಿಗಿಂತ ಹೆಚ್ಚಿನ ಪ್ಲಾಂಟೇಷನ್ ಭೂಮಿಯನ್ನು ಹೊಂದಿರುವುದಿಲ್ಲವೆಂದು ಪ್ರಮಾಣೀಕರಿಸಲಾಗಿದೆ. ಸರ್ಕಾರಿ ಆದೇಶ ಸಂಖ್ಯೆ: ಎಸ್ ಡಬ್ಲೂಡಿ 225 ಬಿಸಿಎ 2000 ದಿನಾಂಕ 30/03/2002 ರ ಅನ್ವಯ ಶ್ರೀ/ ಶ್ರೀಮತಿ/ ಕುಮಾರಿ_______________ ಎವರು_______________ ಜಾತಿಗೆ _____________ ಸೇರಿದ ಉಪ ಜಾತಿಯವರಾಗಿದ್ದು, ಸರ್ಕಾರಿ ಆದೇಶ ಎಸ್ ಡಬ್ಲೂಡಿ 225 ಬಿಸಿಎ 2000 ದಿನಾಂಕ 30/03/2002 ದಿನಾಂಕ 30–03–2002 ರ ಅನ್ವಯ ಹಿಂದುಳಿದ ವರ್ಗಗಳ ಪ್ರವರ್ಗ.

ಸ್ಥಳ
ದಿನಾಂಕ

ತಹಶೀಲ್ದಾರರು
________ ತಾಲ್ಲೂಕು
ಕಛೇರಿಯ ಮೊಹರು

**ನಮೂನೆ –1**

**ಜನರಲ್ ಮೆರಿಟ್ ಅಭ್ಯರ್ತಿಗಳು ಮೇಲುಸ್ತರಕೆಕ ಸೇರಿಲ್ಲವೆಂದು, ದೃಡೀಕರಿಸಿ ಗ್ರಾಮೀನ ಮೀಸಲಾತಿಯನ್ನು ಕೋರಲು ಸಲ್ಲಿಸಬೇಕಾದ ಪ್ರಮಾಣ ಪತ್ರ**
**(ಜನರಲ್ ಮೆರಿಟ್ ಅಭ್ಯರ್ಥಿಗಳು ಭರ್ತಿ ಮಾಡಬೇಕಾದ ನಮೂನೆ)**

**ಇವರಿಗೆ:**

**ತಜಸೀಲ್ದಾರರು,**
**__________ ತಾಲ್ಲೂಕು,**
**__________ ಜಿಲ್ಲೆ,**

ಮಾನ್ಯರೆ,

ಶ್ರೀ/ಶ್ರೀಮತಿ ________________________________ ಎಂಬುವವರ ಮಗ/ಮಗಳು/ಪತಿ/ಪತ್ನಿ________________ಆದ ನಾನು ಮೇಲುಸ್ತರದಲ್ಲಿ ಬರುವುದಿಲ್ಲವೆಂದು ನೇರ ನೇಮಕಾತಿಯಲ್ಲಿ ಗ್ರಾಮೀಣ ಅಭ್ಯರ್ಥಿ ಮೀಸಲಾತಿಯನ್ನು ಪಡೆಯುವುದಕ್ಕಾಗಿ ಪ್ರಮಾಣ ಪತ್ರವನ್ನು ಪಡೆಯಲು ತಮ್ಮಲ್ಲಿ ಈ ಕೆಳಕಂಡ ಮಾಹಿತಿಗಳನ್ನು ಒದಗಿಸುತ್ತಾ ಕೋರುತ್ತೇನೆ.

1. ಅಭ್ಯರ್ಥಿಯ ಹೆಸರು ಮತ್ತು ಉದ್ಯೋಗ
2. ಅಭ್ಯರ್ಥಿಯ ಸ್ವಂತ ಸ್ಥಳ ಗ್ರಾಮ:
   ತಾಲ್ಲೂಕು:
   ಗ್ರಾಮ:
3. ಅಭ್ಯರ್ಥಿಯು ಹುಟ್ಟಿದ ದಿನಾಂಕ ಜಾತಿ ವಯಸ್ಸು ಮತ್ತು ಹುಟ್ಟಿದ ಸ್ಥಳ:
4. ಅಭ್ಯರ್ಥಿಯ ತಂದೆ / ತಾಯಿ / ಪೋಷಕರ / ಪತಿಯ / ಪತ್ನಿಯ ಹೆಸರು ಮತ್ತು ಉದ್ಯೋಗ:
   (ಉದ್ಯೋಗವು ಸರ್ಕಾರಿ / ಅರೆ ಸರ್ಕಾರಿ / ಸಾರ್ವಜನಿಕ ಉದ್ಯಮ / ಖಾಸಗಿ)
5. ಅಭ್ಯರ್ಥಿಯ ಪ್ರಸ್ತುತ ವಿಳಾಸ (ಸ್ಪಷ್ಟವಾಗಿ ನಮೂದಿಸುವುದು)
6. ಅಭ್ಯರ್ಥಿಯ ಖಾಯಂ ವಿಳಾಸ
7. ಅಭ್ಯರ್ಥಿಯ ಶಾಲಾ ಶಿಕ್ಷಣದ ವ್ಯಾಸಂಗ ಮಾಡಿದ ಶಾಲೆಗಳ ವಿವರಗಳು
   ಅ. ಪ್ರಾಥಮಿಕ
   ಆ. ಮಾಧ್ಯಮಿಕ
   ಇ. ಪ್ರೌಢ
8. ಅಭ್ಯರ್ಥಿಯ ಹಾಗೂ ಅಭ್ಯರ್ಥಿಯ ತಂದೆ / ತಾಯಿ / ಪೋಷಕರ(ತಂದೆ / ತಾಯಿ ಜೀವಂತವಿಲ್ಲದಿದ್ದರೆ) ಅವರ ಒಟ್ಟು ವಾರ್ಷಿಕ ಆದಾಯ ಎಲ್ಲಾ ಮೂಲಗಳಿಂದ:
   ಅ. ವೇತನ ಶ್ರೇಣಿ
   ಆ. ಜಮೀನಿನ ವಿವರ
   ಇ. ಇತರ ಮೂಲಗಳು
9. ಆದಾಯ ತೆರಿಗೆ ಪಾವತಿದಾರರೇ?
10. ಸಂಪತ್ತು ತೆರಿಗೆ ಪಾವತಿದಾರರೇ?

ಪ್ರಮಾಣೀಕೃತ ಘೋಷಣೆ

ಈ ಮೇಲೆ ನನ್ನಿಂದ ಒದಗಿಸಿದ ಮಾಹಿತಿ / ವಿವರಣೆಯು ನಾನು ತಿಳಿದಿರುವಷ್ಟರ ಮಟ್ಟಿಗೆ ಸತ್ಯವೆಂದು ಶ್ರದ್ಧಾಪೂರ್ವಕವಾಗಿ ದೃಡೀಕರಿಸುತ್ತೇನೆ ಮತ್ತು ಘೋಷಿಸುತ್ತೇನೆ.

ಸ್ಥಳ ; ತಮ್ಮ ವಿಧೇಯ,
ದಿನಾಂಕ: (ಅಭ್ಯರ್ಥಿಯ ಸಹಿ)

ಮೇಲೆ ಒದಗಿಸಲಾದ ಮಾಹಿತಿಗಳು ಸತ್ಯವಾಗಿರುತ್ತದೆ ಎಂದು ಪ್ರಮಾಣೀಕರಿಸುತ್ತಾ, ಈ ಮಾಹಿತಿಗಳು ಅಸತ್ಯವೆಂದು ಧೃಡಪಟ್ಟಲ್ಲಿ ಅಪರಾಧ ವಿಚಾರಣೆಗೆ ಬದ್ಧನಾಗಿರುತ್ತೇನೆ.

ತಂದೆ / ತಾಯಿ / ಪೋಷಕರ ಸಹಿ,

(ತಂದೆ/ತಾಯಿ/ಜೀವಂತವಿಲ್ಲದಿದ್ದರೆ)
(ಹೆಂಡತಿ/ಗಂಡ/ಇವರ ಸಹಿ)

ಸ್ಥಳೀಯ ಇಬ್ಬರು ಸಾಕ್ಷಿದಾರರು
ಅಭ್ಯರ್ಥಿಯು ಮತ್ತು ತಂದೆ / ತಾಯಿ/ಪೋಷಕರು/ಪತಿ/ಪತ್ನಿ ಇವರನ್ನು ಹಾಗೂ ಇವರ ಸಹಿಯನ್ನು ಗುರುತಿಸುತ್ತೇನೆ.
ಸಾಕ್ಷಿದಾರರ ಸಹಿ: 1)

(ಪೂರ್ಣ ವಿಳಾಸದೊಂದಿಗೆ) 2)

<u>ಪರಿಶೀಲನಾ ಪ್ರಮಾಣ ಪತ್ರ</u>

1. ಶ್ರೀ/ಶ್ರೀಮತಿ–––––––––––––––––––––––––––––––––––––––––––––––––––––ಎಂಬುವವರ ಮಗ/ಮಗಳು/ಪತ್ನಿ ಶ್ರೀ/ಶ್ರೀಮತಿ/ ಕುಮಾರಿ––––––––––––––––––––––––––––––––––––––––– ಎಂಬುವವರು ಕರ್ನಾಟಕ ರಾಜ್ಯದ –––––––––––––––––ಜಿಲ್ಲೆಯ ವಿಭಾಗ ––––––––––––––––––––––– –ಗ್ರಾಮ/ಪಟ್ಟಣ ನಗರದಲ್ಲಿ ಸಾಮಾನ್ಯ ನಿವಾಸಿಯಾಗಿದ್ದಾರೆಂದು ಮತ್ತು ಇವರು ಜನರಲ್ ಮೆರಿಟ್ ವರ್ಗಕ್ಕೆ ಸೇರಿದವರಾಗಿರುತ್ತಾರೆ.

ಶ್ರೀ/ಶ್ರೀಮತಿ/ಕುಮಾರ ––––––––––––––––––––ಇವರ ತಂದೆ/ತಾಯಿ /ಪೋಷಕರು ಸರ್ಕಾರಿ ಆದೇಶ ಸಂಖ್ಯೆ:ಎಸ್‌ಡಬ್ಲೂಡಿ 251 ಬಿಡಿಎ 94, ಬೆಂಗಳೂರು, ದಿನಾಂಕ:31–01–1995 ರನ್ವಯ ಜನರಲ್ ಮೆರಿಟ್ ವರ್ಗದ ಮೇಲುಸ್ತರದಲ್ಲಿ (creamy layer) ಬರುವುದಿಲ್ಲವೆಂದು ಪ್ರಮಾಣೀಕರಿಸಲಾಗಿದೆ.

ಸ್ಥಳ: ತಹಶೀಲ್ದಾರರು
ದಿನಾಂಕ: ––––––––––––––– ತಾಲ್ಲೂಕು
ಕಛೇರಿಯ ಮೊಹರು.

---

ಸೂಚನೆ–1: ಇದರಲ್ಲಿ ಉಪಯೋಗಿಸಲಾದ "ಸಾಮಾನ್ಯ ನಿವಾಸಿ" ಎಂಬ ಪದುವು 1950 ರ ಜನತಾ ಪ್ರಾತಿನಿದ್ಯ ಕಾಯಿದೆಯ 20 ನೇ ಅನುಚ್ಛೇದದಲ್ಲಿನ ಅರ್ಥವನ್ನು ಹೊಂದಿರುತ್ತದೆ.

ಸೂಚನೆ–2: ಪರಿಶೀಲನಾ ಪ್ರಮಾಣ ಪತ್ರ ನೀಡುವ ಅಧಿಕೃತ ಅಧಿಕಾರಿಯು ಸರ್ಕಾರಿ ಆದೇಶ ಸಂಖ್ಯೆ:ಎಸ್‌ಡಬ್ಲ್ಯುಡಿ 251 ಬಿಸಿಎ 94, ಬೆಂಗಳೂರು, ದಿನಾಂಕ:31-01–1995 ರನ್ವಯ ಮೇಲುಸ್ತರ (creamy layer) ದರವನ್ನು ಗುರುತಿಸಲು ನಿಗದಿಪಡಿಸಲಾಗಿರುವ ಅಂಶಗಳನ್ನು ವಿವರವಾಗಿ ಖಚಿತಪಡಿಸಿಕೊಂಡ ನಂತರವೇ ಪ್ರಮಾಣ ಪತ್ರ ನೀಡತಕ್ಕದ್ದು.

## ನಮೂನೆ–2
## ಗ್ರಾಮೀಣ ಅಭ್ಯರ್ಥಿ ಪ್ರಮಾಣ ಪತ್ರ

ಶ್ರೀ/ಶ್ರೀಮತಿ––––––––––––––––––––––––––ರವರ ಮಗ/ಮಗಳು/ಪತಿ/ಪತ್ನಿ ಶ್ರೀ/ಶ್ರೀಮತಿ ಕುಮಾರಿ ––– ––––––––––––––––– ಜಿಲ್ಲೆ –––––––––––––––––––––––––ತಾಲ್ಲೂಕು ––––––––––––––– ಗ್ರಾಮದಲ್ಲಿ ––––––––––––––––––––––ವಾಸವಾಗಿರುವ ಇವರು ಒಂದನೇ ತರಗತಿಯಿಂದ –––––––––– ತರಗತಿಯವರೆಗೆ––––––––––ಜಿಲ್ಲೆ –––––––––ತಾಲ್ಲೂಕು–––––––––––––––ಪಟ್ಟಣ ಶಾಲೆಯಲ್ಲಿ ವ್ಯಾಸಂಗ ಮಾಡಿ––––––– ವರ್ಷ ನಡೆದ ಪರೀಕ್ಷೆಯಲ್ಲಿ ಉತ್ತೀರ್ಣರಾಗಿರುತ್ತಾರೆ. ಈ ಶಾಲೆಯು ಅಭ್ಯರ್ಥಿಯು ವ್ಯಾಸಂಗ ಮಾಡಿದ ಅವಧಿಯಲ್ಲಿ ಕರ್ನಾಟಕದ ಪೌರನಿಗಮಗಳ ಅಧಿನಿಯಮ, 1976 ಅಥವಾ ಕರ್ನಾಟಕ ಪೌರಸಭೆಗಳ ಅಧಿನಿಯಮ, 1964 ರ ಅಡಿಯಲ್ಲಿ ನಿರ್ಧಿಷ್ಟಪಡಿಸಿದ ಒಂದು ದೊಡ್ಡ ನಗರ ಪ್ರದೇಶ, ಸಣ್ಣ ನಗರ ಪ್ರದೇಶ ಅಥವಾ ಪರಿವರ್ತನೆ ಹಂತದಲ್ಲಿರುವ ಪ್ರದೇಶಗಳ ಹೊರತಾದ ಪ್ರದೇಶದಲ್ಲಿತ್ತು.

(ಸಹಿ)
ಮುಖ್ಯೋಪಾಧ್ಯಾಯರು,

ಮೇಲುರುಜು

ಕ್ಷೇತ್ರ ಶಿಕ್ಷಣ ಅಧಿಕಾರಿ

–––––––––––––––––––––––––––––––––––––––––––––––––––––––––––

ಸರ್ಕಾರದ ಸುತ್ತೋಲೆ ಸಂಖ್ಯೆ:ಸಿಆಸುಇ 44 ಸೇನೆನಿ 2001 ದಿನಾಂಕ:27–07–2001

ನಮೂನೆ

**<u>ಯೋಜನೆಗಳಿಂದ ನಿರ್ವಸಿತರಾದ ಕುಟುಂಬದ ಅಭ್ಯರ್ಥಿ</u>**

**<u>ಪ್ರಮಾಣ ಪತ್ರ</u>**

ಸರ್ಕಾರದ ಆದೇಶ ಡಿಪಿಎಆರ್ /23 / ಎಸ್‌ಆರ್‌ಆರ್ 93 ದಿ:23–11–2000

ಶ್ರೀ/ಶ್ರೀಮತಿ---------------------- ಎಂಬುವವರ ಮಗ/ಮಗಳು/ಪತಿ/ಪತ್ನಿ/ಶ್ರೀಮತಿ/ ಕುಮಾರಿ------ ಜಿಲ್ಲೆ-----------------ತಾಲ್ಲೂಕು-----------ಗ್ರಾಮದಲ್ಲಿ---------------ವಾಸವಾಗಿರುವ ಇವರು : ಇವರ ಕುಟುಂಬದವರು ಅವಲಂಬಿತರಾಗಿದ್ದ ಈ ಕೆಳಕಂಡ ಆಸ್ತಿಯನ್ನು ---------------ಯೋಜನೆಗಾಗಿ-------------- ---------------ಇಸವಿ------------------------ಯಂದು ಸ್ವಾಧೀನಪಡಿಸಕೊಳ್ಳಲಾಗಿದೆ ಎಂದು ಈ ಮೂಲಕ ಪ್ರಮಾಣೀಕರಿಸಿದೆ:–

- ವಾಸಿಸುವ ಮನೆ ಮತ್ತು ತಾವು ಅವಲಂಬಿತರಾಗಿದ್ದ ಅವರ ಕೃಷಿ ಭೂಮಿಯ ಅರ್ಧದಷ್ಟು:
- ಯೋಜನೆಗೆ ಮೊದಲು ಭೂಮಿಯನ್ನು ಹೊಂದಿರದೆ : ಯೋಜನೆಯಿಂದ ತಾವು ವಾಸಿಸುವ ಮನೆ:
- ತಾವು ಅವಲಂಭಿತರಾಗಿದ್ದ ತಮ್ಮ ಕೃಷಿ ಭೂಮಿಯ ಅರ್ಧದಷ್ಟು ಅಥವಾ ಅದಕ್ಕಿಂತ ಕಡಿಮೆ ಕೃಷಿ ಭೂಮಿ.
- ಇತರ ಇನ್ನಾವುದೇ ಪ್ರಕರಣದಲ್ಲಿ ಯೋಜನೆಯಿಂದ ನಿರ್ವಸಿತರಾದವರು.

ತಹಶೀಲ್ದಾರ್

---------ತಾಲ್ಲೂಕು

(ಅನ್ವಯವಾಗುವ ಐಟಂನ್ನು ಮಾತ್ರ ಪ್ರಮಾಣ ಪತ್ರದಲ್ಲಿ ನಮೂದಿಸತಕ್ಕದ್ದು)

**<u>ಕನ್ನಡ ಮಾಧ್ಯಮ ವ್ಯಾಸಂಗ ಪ್ರಮಾಣ ಪತ್ರ</u>**

ಶ್ರೀ/ ಶ್ರೀಮತಿ--------------------------------------ರವರ ಮಗ/ಮಗಳು ಪತ್ನಿ/ಶ್ರೀ/ಶ್ರೀಮತಿ ಕುಮಾರಿ------------------------ಜಿಲ್ಲೆ----------------ತಾಲ್ಲೂಕು ---------ಗ್ರಾಮದಲ್ಲಿ --------------------ವಾಸವಾಗಿರುವ ಇವರು ---------------ತರಗತಿಯಿಂದ -------------ತರಗತಿಯವರೆಗೆ -------------ಶೈಕ್ಷಣಿಕ ವರ್ಷದಿಂದ ----------ಶೈಕ್ಷಣಿಕ ವರ್ಷದವರೆಗೆ ----------------------------ಶಾಲೆಯಲ್ಲಿ ಕನ್ನಡ ಮಾಧ್ಯಮದಲ್ಲಿ ವ್ಯಾಸಂಗ ಮಾಡಿರುತ್ತಾರೆಂದೂ ಪ್ರಮಾಣೀಕರಿಸಲಾಗಿದೆ.

ಮುಖ್ಯೋಪಾಧ್ಯಾಯರ ಸಹಿ ಮತ್ತು ಸಂಸ್ಥೆಯ ಮೊಹರು.

ದಿನಾಂಕ: ---------------

ಸ್ಥಳ:------------------

ಸೂಚನೆ:– ಆಭ್ಯರ್ಥಿಗಳು ಒಂದಕ್ಕಿಂತ ಹೆಚ್ಚಿನ ಶಾಲೆಗಳಲ್ಲಿ ವ್ಯಾಸಂಗ ಮಾಡಿದ್ದಲ್ಲಿ ಶಾಲಾವಾರು ಪ್ರತ್ಯೇಕ ಕನ್ನಡ ಮಾಧ್ಯಮ ವ್ಯಾಸಂಗ ಪ್ರಮಾಣ ಪತ್ರ ಸಲ್ಲಿಸಬೇಕು.

***********************

ಮುದ್ರಕರು:

ನಿರ್ದೇಶಕರು, ಮುದ್ರಣ ಲೇಖನಿ ಸಾಮಗ್ರಿ ಮತ್ತು ಪ್ರಕಟಣೆಗಳ ಇಲಾಖೆ, ಸರ್ಕಾರಿ ಕೇಂದ್ರ ಮುದ್ರಣಾಲಯ, ಬೆಂಗಳೂರು–560059

**ರಾಜ್ಯ ಸರ್ಕಾರಿ / ಕೇಂದ್ರ ಸರ್ಕಾರಿ ನೌಕರರು ಒದಗಿಸಬೇಕಾದ ಪ್ರಮಾಣ ಪತ್ರ**

ಶ್ರೀ / ಶ್ರೀಮತಿ……………………………………………………ರವರು ರಾಜ್ಯ / ಕೇಂದ್ರ ಸರ್ಕಾರದಲ್ಲಿ .(ಪದನಾಮ) ..ಇಲಾಖೆಯಲ್ಲಿ ಖಾಯಂ / ತಾತ್ಕಾಲಿಕ ಹುದೆಯನ್ನು ದಿನಾಂಕ: ರಿಂದ ರವರೆಗೆ ಹೊಂದಿರುವವರು. ಈ ಹುದ್ದೆಗೆ ಇವರು ನೇಮಕಾತಿ ನಿಯಮಗಳಡಿ ಆಯ್ಕೆಯಾಗಿದ್ದು, ಸದರಿ ಹುದ್ದೆಗೆ ಅರ್ಜಿ ಸಲ್ಲಿಸಲು ಅವರಿಗೆ ಅನುಮತಿ ನೀಡಲಾಗಿದೆ.

**ಸ್ಥಳ:** **ನೇಮಕಾತಿ ಪ್ರಾಧಿಕಾರದ ಸಹಿ/–**
**ದಿನಾಂಕ:** **ಇಲಾಖೆಯ ಹೆಸರು ಮತ್ತು ಮೊಹರಿನೊಂದಿಗೆ**

## CERTIFICATE TO BE FURNISHED BY THE STATE / CENTRAL GOVT. SERVANTS

Certified that Sri / Smt ……………………………………………holds a p[ermanent / temporary post under the State / Central Govt. ………………………………………(Designation) in the department of ------------------------------------------------------------------------------------------------------------from …………………………having been appointed therein under the rules of recruitment. He / she is permitted to apply for the said post.

Place : Signature of the Appointine Aurhority
Date: of the Department / with name and seal.